# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 65 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಗುರುವಾರ ದಿನಾಂಕ : 17-09-2026 ಪುಟ : 04 ಬೆಲೆ : 2-00


## ಗ್ರಾಮ ಪಂಚಾಯ್ತಿಗೆ ಬಂದಿದ್ದ ತಂದೆ-ಮಗಳ ಬರ್ಬರ ಹತ್ಯೆ





ಬೆಳಗಾವಿ: ಗ್ರಾಮ ಪಂಚಾಯತಿ ಕಚೇರಿಗೆ ಆಸ್ತಿ ಪಾಲು ಮಾಡಲು ಅರ್ಜಿ ಸಲ್ಲಿಸಲು ಬಂದಿದ್ದ ತಂದೆ ಮತ್ತು ಮಗಳನ್ನು ಬರ್ಬರ ಹತ್ಯೆ ಮಾಡಿರುವ ಘಟನೆ ಬೆಳಗಾವಿಯ ಕಿತ್ತೂರಿನ ಅವರಾದಿ ಗ್ರಾಮದಲ್ಲಿ ನಡೆದಿದೆ. ಈ ಸಂಬಂಧ ಕಿತ್ತೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

ಮೃತರನ್ನು ಧಾರವಾಡದ ನಿವಾಸಿಗಳಾದ 67 ವರ್ಷದ ಮಾಜಿ ಯೋಧ ರುದ್ರಪ್ಪ ಕುಂದರಗಿ ಹಾಗೂ 26 ವರ್ಷದ ಶಶಿಕಲಾ ಕುಂದರಗಿ ಎಂದು ಗುರುತಿಸಲಾಗಿದೆ. ರುದ್ರಪ್ಪ ಹಾಗೂ ಅವರ ಸಹೋದರರಾದ ಬಸಪ್ಪ ಕುಂದರಗಿ, ಸಂಗಪ್ಪ ಕುಂದರಗಿ ನಡುವೆ ಆಸ್ತಿ ಸಂಬಂಧ ಜಗಳವಿತ್ತು.

2ನೇ ಪುಟಕ್ಕೆ...

## ಯುಪಿಐ ಶುಲ್ಕ ನಿಯಮ; ಟ್ರಂಪ್ ಮುಂದೆ ಶರಣಾಗಬೇಡಿ;

# ಮೋದಿ ವಿರುದ್ಧ ರಾಹುಲ್ ಕಿಡಿ





ನವದೆಹಲಿ: ಯುಪಿಐ ವಹಿವಾಟುಗಳ ಮೇಲಿನ ಹೊಸ 'ಮರ್ಚೆಂಟ್ ಡಿಸ್ಕೌಂಟ್ ರೇಟ್' ಕಟ್ಟುಪಾಡುಗಳನ್ನು ಹಿಂಪಡೆಯುವಂತೆ ಆಗ್ರಹಿಸಿ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಾಗ್ದಾಳಿ ನಡೆಸಿದ್ದಾರೆ.

ಕೇಂದ್ರ ಸರ್ಕಾರ ಅಮೆರಿಕದ ಒತ್ತಡಕ್ಕೆ ಶರಣಾಗಿ ಭಾರತೀಯರ ಮೇಲೆ ಯುಪಿಐ ತೆರಿಗೆ ವಿಧಿಸುತ್ತಿದೆ ಎಂದು ರಾಹುಲ್ ಗಾಂಧಿ ಆರೋಪಿಸಿದ್ದಾರೆ.

ತಮ್ಮ ಅಜ್ಜಿ ಹಾಗೂ ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರನ್ನು ನೆನಪಿಸಿಕೊಂಡ ರಾಹುಲ್ ಗಾಂಧಿ, ಒಮ್ಮೆ ಇಂದಿರಾ ಗಾಂಧಿಯವರನ್ನು ನೀವು ಎಡಪಂಥೀಯರೇ ಅಥವಾ ಬಲಪಂಥೀಯರೇ ಎಂದು ಕೇಳಲಾಗಿತ್ತು. ಅದಕ್ಕೆ ಅವರು 'ನಾನು ಎಡಕ್ಕೂ ಹೋಗುವುದಿಲ್ಲ, ಬಲಕ್ಕೂ ಹೋಗುವುದಿಲ್ಲ, ನೆಟ್ಟಗೆ ನಿಲ್ಲುತ್ತೇನೆ' ಎಂದಿದ್ದರು ಎಂದು ಹೇಳಿದ್ದಾರೆ. ಆದರೆ, ಮೋದಿಯವರು ಅದಕ್ಕೆ ಸಂಪೂರ್ಣ ಭಿನ್ನ. ಅವರು ಎಡಕ್ಕೂ ಇಲ್ಲ, ಬಲಕ್ಕೂ

2ನೇ ಪುಟಕ್ಕೆ...

## ನಕಲಿ ಔಷಧ ತಯಾರಕರ ವಿರುದ್ಧ ಕೊಲೆ ಕೇಸ್: ಸಚಿವ ಖಾದರ್ ಎಚ್ಚರಿಕೆ




ಮಂಗಳೂರು: ನಕಲಿ ಔಷಧಗಳನ್ನು ತಯಾರಿಸುವ ಹಾಗೂ ಮಾರಾಟ ಮಾಡುವವರ ವಿರುದ್ಧ ಕೇವಲ ಪರವಾನಗಿ ರದ್ದುಪಡಿಸುವುದು ಅಥವಾ ದಂಡ ವಿಧಿಸುವ ಬದಲು ಕಠಿಣ ಕ್ರಿಮಿನಲ್ ಕ್ರಮ ಕೈಗೊಳ್ಳಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಹೇಳಿದ್ದಾರೆ.

ಈ ಘಟನೆಯನ್ನು 'ಎಚ್ಚರಿಕೆಯ ಗಂಟೆ' ಎಂದು ಬಣ್ಣಿಸಿದ ಅವರು, ಮಾನವ ಜೀವಗಳಿಗೆ ಅಪಾಯ ಉಂಟುಮಾಡುತ್ತಿರುವ ಇಂತಹ ಆರೋಪಿಗಳ ವಿರುದ್ಧ ಕೊಲೆ ಯತ್ನ ಅಥವಾ ಕೊಲೆ ಸೇರಿದಂತೆ ಗಂಭೀರ ಪ್ರಕರಣಗಳನ್ನು ದಾಖಲಿಸಲು ಕಾನೂನುಗಳಿಗೆ ತಿದ್ದುಪಡಿ ತರಬೇಕೆಂದು

3ನೇ ಪುಟಕ್ಕೆ...

## ರಾಜ್ಯದ ಯಾವುದೇ ವಿಧಾನಸಭಾ ಕ್ಷೇತ್ರದಿಂದ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಲು ಸಿದ್ಧ: ಸಿದ್ದೇಶ್ವರ ಇಂಗಿತ



ದಾವಣಗೆರೆ: ಮಾಜಿ ಕೇಂದ್ರ ಸಚಿವ ಹಾಗೂ ದಾವಣಗೆರೆ ಮಾಜಿ ಸಂಸದ ಡಾ.ಜಿ.ಎಂ. ಸಿದ್ದೇಶ್ವರ ಅವರು ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸುವ ಇಂಗಿತ ವ್ಯಕ್ತಪಡಿಸುವ ಮೂಲಕ ರಾಜ್ಯ ರಾಜ-ಕಾರಣಕ್ಕೆ ಮರಳುವ ಸಾಧ್ಯತೆಯ ಸುಳಿವು ನೀಡಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ಪ್ರಸ್ತಾಪಿಸಿದ ಅವರು, ಪಕ್ಷದ ವರಿಷ್ಠರು ಹಾಗೂ ರಾಜ್ಯ ನಾಯಕತ್ವ ಅವಕಾಶ ನೀಡಿದರೆ ವಿಧಾನಸಭೆ ಚುನಾವಣೆಯಲ್ಲಿ ಸ್ಪರ್ಧಿಸಲು ಸಿದ್ಧವಿರುವುದಾಗಿ ತಿಳಿಸಿದರು. ದಾವಣಗೆರೆ ಜಿಲ್ಲೆಯಲ್ಲಿ ಮಾತ್ರವಲ್ಲದೆ, ರಾಜ್ಯದ ಯಾವುದೇ ವಿಧಾನಸಭಾ ಕ್ಷೇತ್ರದಿಂದ ಪಕ್ಷದ ಅಭ್ಯರ್ಥಿಯನ್ನಾಗಿ ಮಾಡಿದರೂ ಸ್ಪರ್ಧಿಸಲು ಸಿದ್ಧ ಎಂದರು.

'ಯಾವ ಕ್ಷೇತ್ರ ನೀಡಿದರೂ ಕಣಕ್ಕಿಳಿಯುವೆ': ಪಕ್ಷದ ನಾಯಕತ್ವ ನಿರ್ಧರಿಸಿ ಯಾವುದೇ ಕ್ಷೇತ್ರದಿಂದ ಸ್ಪರ್ಧಿಸುವ ಅವಕಾಶ ನೀಡಿದರೂ ಚುನಾವಣಾ ಕಣಕ್ಕಿಳಿಯುವುದಾಗಿ

2ನೇ ಪುಟಕ್ಕೆ...

## ಬಡವರಿಗೆ ನಿವೇಶನ; ತಿಂಗಳಾಂತ್ಯದೊಳಗೆ ಭೂಮಿ ಗುರುತಿಸುವ ಕಾರ್ಯ ಪೂರ್ಣಗೊಳಿಸಿ: ಪರಮೇಶ್ವರ್ ಸೂಚನೆ

ಬೆಂಗಳೂರು: ಉಪ ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಡಾ.ಜಿ.ಪರಮೇಶ್ವರ ಅವರು ಇಂದು ವಿಧಾನಸೌಧದಲ್ಲಿ ಎಲ್ಲ ಜಿಲ್ಲಾಧಿಕಾರಿಗಳೊಂದಿಗೆ ವೀಡಿಯೋ ಕಾನ್ಫರೆನ್ಸ್ ಮೂಲಕ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು.

ಬಡವರಿಗೆ ನಿವೇಶನ ನೀಡುವ ಕಾರ್ಯಕ್ರಮ ಘೋಷಣೆಯಾದ ಬಳಿಕ ಜನರಿಂದ ಉತ್ತಮ ಪ್ರತಿಕ್ರಿಯೆ ಬರುತ್ತಿದೆ. ಈ ಯೋಜನೆಯನ್ನು ಅಧಿಕಾರಿಗಳು



ಗಂಭೀರವಾಗಿ ಪರಿಗಣಿಸಬೇಕು. ಕೆಲ ಜಿಲ್ಲೆಗಳಲ್ಲಿ ಭೂಮಿ ಗುರುತಿಸುವ ಕೆಲಸ ಆಗಿಲ್ಲ. ನಿವೇಶನ ಸಿದ್ಧಪಡಿಸಲು ಭೂಮಿ ಗುರುತಿಸುವ ಪ್ರಕ್ರಿಯೆಯನ್ನು ತಿಂಗಳಾಂತ್ಯದ ವೇಳೆಗೆ ಪೂರ್ಣಗೊಳಿಸಬೇಕು. ಈ ಬಗ್ಗೆ ನಿರ್ಲಕ್ಷಿಸುವುದು ಬೇಡ. ಹಿರಿಯ ಅಧಿಕಾರಿಗಳು ಟೆಕ್ನಿಕಲ್ ಸಹಕಾರ ನೀಡಲಿದ್ದಾರೆ ಎಂದು ತಿಳಿಸಿದರು.

ಸಭೆಯಲ್ಲಿ ಕಂದಾಯ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ರಾಜೇಂದರ್ ಕುಮಾರ್ ಕಟಾರಿಯಾ, ವಿಪತ್ತು ನಿರ್ವಹಣಾ ಇಲಾಖೆಯ ಕಾರ್ಯದರ್ಶಿಗಳಾದ ಮನೋಜ್ ಕುಮಾರ್ ಮೀನಾ, ಕಂದಾಯ ಆಯುಕ್ತರಾದ ಮೀನಾ ನಾಗರಾಜ್,

2ನೇ ಪುಟಕ್ಕೆ...

## ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಭರತ್‌ರೆಡ್ಡಿ ಚಾಲನೆ



ಬಳ್ಳಾರಿ : ಬಳ್ಳಾರಿ ನಗರ ಶಾಸಕ ನಾರಾ ಭರತ್‌ರೆಡ್ಡಿಯವರು ಇಂದು ವಿವಿಧ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಅಂ-ದಾಜು ಐದು ಕೋಟಿ ರೂಪಾಯಿಗಳ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಪರ ಕಾಮಗಾರಿಗಳಿಗೆ, ಭೂಮಿ ಪೂಜೆ ನೆರವೇರಿಸಿ, ಚಾಲನೆ ನೀಡಿದರು. ಮಹಾನಗರ ಪಾಲಿಕೆಯ 13 ವಾರ್ಡ್‌ನಲ್ಲಿ ಅಂದಾಜು 2 ಕೋಟಿ ರೂಪಾಯಿಗಳಿಗೂ ಅಧಿಕ ವೆಚ್ಚದಲ್ಲಿ ಒಳಚರಂಡಿ ಕಾಮಗಾರಿ ಹಾಗು ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು.

## ನೀರು ಬಿಡುವವರೆಗೆ ಕದಲಲ್ಲ: ರೈತರ ಪಟ್ಟು



**ರೈತರ ಮೂರು ಪ್ರಮುಖ ಬೇಡಿಕೆಗಳು**
- ಭದ್ರಾ ಡ್ಯಾಂನಿಂದ ಬಲದಂಡೆ ನಾಲೆಗೆ ತಕ್ಷಣ ನೀರು ಬಿಡುಗಡೆ
- ಸೂಳೆಕೆರೆ ಗೇಟ್ ಎತ್ತಿ ನೀರು ಹರಿಸುವುದು
- ರೈತರಿಗೆ ಸತತ 7 ಗಂಟೆ ನಿರಂತರ ವಿದ್ಯುತ್ ಪೂರೈಕೆ

ದಾವಣಗೆರೆ: ಭದ್ರಾ ಡ್ಯಾಂನಿಂದ ಬಲದಂಡೆ ನಾಲೆಗೆ ತಕ್ಷಣ ನೀರು ಹರಿಸುವುದು ಹಾಗೂ ರೈತರಿಗೆ ಸತತ 7 ಗಂಟೆ ನಿರಂತರ ವಿದ್ಯುತ್ ಪೂರೈಸುವಂತೆ ಒತ್ತಾಯಿಸಿ ರೈತ ಮುಖಂಡ ತೇಜಸ್ವಿ ವಿ.ಪಟೇಲ್ ಹಾಗೂ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ಟ್ರ್ಯಾಕ್ಟರ್ ಚಳವಳಿಗೆ ಪೊಲೀಸರು ತಡೆಯೊಡ್ಡಿದ ಘಟನೆ ಬುಧವಾರ ನಗರದ ಹೊರವಲಯದ ಶಿರಮಗೊಂಡನಹಳ್ಳಿ ಕ್ರಾಸ್‌ನಲ್ಲಿ ನಡೆಯಿತು.

ಚನ್ನಗಿರಿ ತಾಲ್ಲೂಕಿನ ಕಾರಿಗನೂರು ಸುತ್ತಮುತ್ತಲಿನ ಗ್ರಾಮಗಳು ಸೇರಿದಂತೆ ಚನ್ನಗಿರಿ, ಹರಿಹರ, ದಾವಣಗೆರೆ, ಮಾಯಕೊಂಡ ಮತ್ತಿತರ ಪ್ರದೇಶಗಳಿಂದ

3ನೇ ಪುಟಕ್ಕೆ...

## ಮಲ್ಲಿಕಾರ್ಜುನ್ ಹರೀಶ್ ಅವರ ಕ್ಷಮೆ ಯಾಚಿಸಲು ಸಿದ್ದೇಶ್ವರ ಒತ್ತಾಯ

ದಾವಣಗೆರೆ: ಹರಿಹರ ಶಾಸಕ ಬಿಪಿ ಹರೀಶ್ ಅವರ ಬಗ್ಗೆ ಅವಹೇಳನಕಾರಿ ಮಾತನಾಡಿದ್ದಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು ಬಿಪಿ ಹರೀಶ್ ಅವರಿಗೆ ಕ್ಷಮೆ ಕೇಳಬೇಕು ಎಂದು ಜಿಎಂ ಸಿದ್ದೇಶ್ವರ್ ಒತ್ತಾಯಿಸಿದರು.

ಜಿಎಂಐಟಿ ಗೆಸ್ಟ್ ಹೌಸ್ ನಲ್ಲಿನಡೆಸಿದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಉಸ್ತುವಾರಿ ಸಚಿವರು ಮೊದಲು ಸಂಸ್ಕಾರ ಕಲಿಯಬೇಕು, ಅವರಿಗೆ ಮೊದಲಿನಿಂದಲೂ ಸಂಸ್ಕಾರ ಹಾಗೂ ಪ್ರಬುದ್ಧತೆ ಇಲ್ಲ, ನನಗೂ ಕೂಡ ಅವರು ಏಕವಚನದಲ್ಲಿ ಮಾತನಾಡಿದ್ದಾರೆ ದೊಡ್ಡವರಿಗೆ ಗೌರವ ಕೊಡುವ ಸಂಸ್ಕಾರ ಕಲಿಯಲಿ ಎಂದು ತಿಳಿಸಿದರು.

ಅಧಿಕಾರ ಮತ್ತು ಸಾಹುಕಾರಿಕೆ ಯಾರೊಬ್ಬರಿಗೂ ಶಾಶ್ವತವಲ್ಲ. ದೇಶ ಮತ್ತು ರಾಜ್ಯವನ್ನು ಆಳಿದ ಅನೇಕ ಶ್ರೀಮಂತರು ಹಾಗೂ ಅಧಿಕಾರಿಗಳನ್ನು ನೋಡಿದ್ದೇವೆ. ವ್ಯಕ್ತಿಗೆ ನಡೆ ಮತ್ತು ನುಡಿ ಮಾತ್ರ ಶಾಶ್ವತ ಎಂಬುದನ್ನು ಸಚಿವರು ನೆನಪಿಟ್ಟುಕೊಳ್ಳಬೇಕು ಎಂದು ಕಿಡಿಕಾರಿದರು.

ಮೊದಲು ಸಂಸ್ಕಾರ ಬೆಳೆಸಿಕೊಳ್ಳಲಿ. ದರ್ಪ, ಅಹಂಕಾರ ಒಳ್ಳೆಯದಲ್ಲ, ಪ್ರಬುದ್ಧತೆ ಬೇಕು. ಅಧಿಕಾರ ಸಿಗುತ್ತೆ ಹೋಗುತ್ತೆ. ಸಾಹುಕಾರಿಕೆ ಇರುತ್ತೆ ಹೋಗುತ್ತೆ. ಬಹಳ ಶ್ರೀಮಂತರು, ಅಧಿಕಾರಿಗಳು, ದೇಶ ಮತ್ತು ರಾಜ್ಯ ಆಳಿದವರನ್ನು ನೋಡಿದ್ದೇನೆ. ಹೇಗೆ ಇದ್ದಾರೆ ಎಂದು ಯೋಚನೆ ಮಾಡಲಿ. ನಡೆ ನುಡಿ ಶಾಶ್ವತ ಸಚಿವ ಮಲ್ಲಿಕಾರ್ಜುನ್ ಅವರಿಗೆ ವಯಸ್ಸಾದ ಹಿರಿಯರ ಜೊತೆ ಹೇಗೆ ಮಾತನಾಡಬೇಕೆಂಬ ಅರಿವಿಲ್ಲ. ಈ ಹಿಂದೆಯೂ ನನ್ನ ವಿರುದ್ಧ ಏಕವಚನ ಬಳಸಿ ಮಾತನಾಡಿದ್ದರು. ಇತ್ತೀಚೆಗೆ ಹರಿಹರ ಕ್ಷೇತ್ರದ ಬಿಜೆಪಿ ಶಾಸಕ ಬಿ. ಪಿ. ಹರೀಶ್ ಅವರ ವಿರುದ್ಧ ಅವರು ಬಳಸಿರುವ ಅವಾಚ್ಯ ಪದಗಳು ಅಕ್ಷಮ್ಯ. ಜನಪ್ರತಿನಿಧಿಗೆ ಈ ರೀತಿ ನಿಂದಿಸುವುದು ಸರಿಯಲ್ಲ ಎಂದು ಖಂಡಿಸಿದರು.

ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ತಕ್ಷಣವೇ ಶಾಸಕ ಬಿ.ಪಿ. ಹರೀಶ್ ಹಾಗೂ ಜಿಲ್ಲೆಯ ಜನರ ಕ್ಷಮೆಯಾಚಿಸಬೇಕು. ಈ ಮೂಲಕ ಜಿಲ್ಲೆಗೆ ಒಳ್ಳೆಯ ಸಂದೇಶ ನೀಡಬೇಕು ಎಂದು ಸಿದ್ದೇಶ್ವರ ಆಗ್ರಹಿಸಿದರು.

ಅಡಿಕೆ ಬೆಳೆಗಾರರು ಯಾರೂ ಕೂಡ ಧೃತಿಗೆಡಬಾರದು ಈ ಹಿಂದೆನೇ ಗುಟ್ಕಾ ನಿಷೇಧ ಮಾಡಲಾಗಿತ್ತು ಪಾನ್ ಮಸಾಲ ಇತ್ತು ಅಡಿಕೆ ಬೆಳೆಗಾರರು ಯಾವುದಕ್ಕೂ ಚಿಂತೆ ಮಾಡಬಾರದು ದರದಲ್ಲಿ ಸ್ವಲ್ಪ ಕಡಿಮೆಯಾಗಿದೆ ಮುಂದಿನ

4ನೇ ಪುಟಕ್ಕೆ...

## ಸತೀಶ್ ಜಾರಕಿಹೊಳಿ ಎಸ್‌ಟಿ ನಾಯಕ ಎಂಬ ಕಾರಣಕ್ಕಾಗಿ ಇ.ಡಿ ದಾಳಿ ನಡೆದಿದೆ: ಸುರ್ಜೇವಾಲ





ಬೆಂಗಳೂರು: ಸಚಿವ ಸತೀಶ್ ಜಾರಕಿಹೊಳಿ ಅವರು ರಾಜ್ಯದ ಎಸ್‌ಟಿ ಮತ್ತು ಬಡ ಸಮುದಾಯಗಳ 'ಅತ್ಯಂತ ದೊಡ್ಡ ನಾಯಕ' ಎಂಬ ಕಾರಣಕ್ಕಾಗಿ ಅವರನ್ನು ಇ.ಡಿ ಗುರಿಯಾಗಿಸಿಕೊಂಡಿದೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಬುಧವಾರ ಆರೋಪಿಸಿದ್ದಾರೆ. ಆದರೆ, ಕಾಂಗ್ರೆಸ್ ಪಕ್ಷವು ಅವರೊಂದಿಗೆ ಒಗ್ಗಟ್ಟಿನಿಂದ ನಿಲ್ಲುತ್ತದೆ ಎಂದು

3ನೇ ಪುಟಕ್ಕೆ...

## ಬರಪೀಡಿತ ರೈತರಿಗೆ ಸಾಲ ಮರುಪಾವತಿಯಲ್ಲಿ ವಿನಾಯಿತಿ



ಬೆಂಗಳೂರು: ರಾಜ್ಯದ ಬರಪೀಡಿತ ತಾಲೂಕುಗಳ ರೈತರ ನೆರವಿಗೆ ಧಾವಿಸಿರುವ ಬ್ಯಾಂಕರ್‌ಗಳ ರಾಜ್ಯ ಮಟ್ಟದ ಸಮಿತಿ (ಎಸ್‌ಎಲ್‌ಬಿಸಿ), ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳ ಮರುಪಾವತಿಗೆ ಸಂಬಂಧಿಸಿದಂತೆ ವಿಶೇಷ ಪರಿಹಾರ ಯೋಜನೆಯನ್ನು ಪ್ರಕಟಿಸಿದೆ.

ಸಾಲ ಮರುಪಾವತಿಗೆ 12 ತಿಂಗಳ ಕಾಲಾವಕಾಶ (ಮೊರಟೋರಿಯಂ) ನೀಡುವುದರ ಜೊತೆಗೆ, ಒಟ್ಟು ಸಾಲ ಮರುಪಾವತಿಯ ಅವಧಿಯನ್ನು ವಿಸ್ತರಿಸಿ ರೈತರಿಗೆ ನೆರವಾಗಲು ನಿರ್ಧರಿಸಲಾಗಿದೆ. ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಸಭೆಯ ಪ್ರಕಾರ ಈ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಲಾಗಿದೆ.

4ನೇ ಪುಟಕ್ಕೆ...

# ಸಹಕಾರಿ ಕ್ಷೇತ್ರದಲ್ಲಿ ನ್ಯಾಯ–ನಿಷ್ಠುರತೆ ಅನಿವಾರ್ಯ: ಓಂಕಾರ ಶ್ರೀಗಳು



ದಾವಣಗೆರೆ : ಶ್ರೀ ವೀರಮಾಹೇಶ್ವರ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯು ಜಂಗಮ ಸಮಾಜದ ರಾಜ್ಯದಲ್ಲಿಯೇ ಪ್ರಪ್ರಥಮ ಸೊಸೈಟಿಯಾಗಿದ್ದು, ಪಂಚಪೀಠಾಧೀಶ್ವರರ ಅಮೃತಹಸ್ತದಿಂದ ಉದ್ಘಾಟಿಸಲಾದ ಸೊಸೈಟಿಯಾಗಿದೆ ಎಂಬುದು ಹೆಮ್ಮೆಯ ವಿಷಯ. ಇತ್ತೀಚೆಗೆ ದೇಣಿಗೆಯ ಮೂಲಕ ಸ್ವಂತ ಕಟ್ಟಡ ನಿರ್ಮಾಣ ಮಾಡಿರುವ ಆಡಳಿತ ಮಂಡಳಿಯ ಕಾರ್ಯವನ್ನು ಶ್ರೀಗಳು ಶ್ಲಾಘಿಸಿದರು.

ನಗರದ ಶ್ರೀ ವೀರಮಾಹೇಶ್ವರ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯ 30 ನೇ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಷ.ಬ್ರ. ಶ್ರೀ ಓಂಕಾರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿದರು.

ಸಹಕಾರಿ ಕ್ಷೇತ್ರದಲ್ಲಿ ನ್ಯಾಯ–ನಿಷ್ಠುರತೆ ಅನಿವಾರ್ಯವಾಗಿದೆ. ನ್ಯಾಯಪೂರಕವಾಗಿ ಆಡಳಿತ ಮಂಡಳಿ ನಡೆದುಕೊಳ್ಳಬೇಕು ಹಾಗೂ ಕೊಟ್ಟ ಸಾಲವನ್ನು ನಿಷ್ಠೂರವಾಗಿ ವಸೂಲಾತಿ ಮಾಡಬೇಕು ಈ ಕೆಲಸವನ್ನು ಸೊಸೈಟಿ ಉತ್ತಮವಾಗಿ ನಿರ್ವಹಿಸುತ್ತಿದೆ ಎಂದು ಶ್ರೀಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತ್ಯಾವಣಿಗಿ ವೀರಭದ್ರಸ್ವಾಮಿ ಮಾತನಾಡಿ, ಪ್ರಸಕ್ತ ಸಾಲಿನಲ್ಲಿ

87,87,224–00 ರೂ. ಲಾಭ ಹಾಗೂ ನಿವ್ವಳ ಲಾಭ 12,26,311 ರೂ. ಆಗಿರುತ್ತದೆ. ಈ ವರ್ಷ 12% ಡಿವಿಡೆಂಡ್ ಕೊಡಲಾಗುತ್ತದೆ. ಮುಂದಿನ ವರ್ಷ 1 ಕೋಟಿ ರೂ ಲಾಭ ತರುತ್ತೇವೆ ಎಂದು ಭರವಸೆ ನೀಡಿದರು.

2025–26ನೇ ಸಾಲಿನ ಲಾಭ–ನಷ್ಟ ವಿವರವನ್ನು ನಿರ್ದೇಶಕ ಬಿ.ಎಂ. ರವಿ ಪ್ರಸ್ತುತಪಡಿಸಿದರು.

2026–27ನೇ ಸಾಲಿನ ವಾರ್ಷಿಕ ಮುಂಗಡ ಪತ್ರವನ್ನು ಆರ್.ಎಂ. ವೀರಯ್ಯ ಓದಿ ಅನುಮೋದನೆ ಪಡೆದರು. 2025–26ನೇ ಸಾಲಿನ ಲಾಭ ವಿಲೇವಾರಿಯನ್ನು ಕುರುಡಿ ಮಂಜುನಾಥ್ ಪ್ರಸ್ತುತಪಡಿಸಿದರು. 2025–26ನೇ ಸಾಲಿನಲ್ಲಿ ಸದಸ್ಯರ ಸೇರ್ಪಡೆ ಹಾಗೂ ತೆಗೆದುಹಾಕುವಿಕೆಯ ಬಗ್ಗೆ ಶ್ರೀಮತಿ ಸುಮನ್ ಕಟಗಿಹಳ್ಳಿ ಮಠ ಸಭೆಯ ಗಮನಕ್ಕೆ ತಂದರು. ಸೊಸೈಟಿಯ ಪ್ರಗತಿ ಪಕ್ಷ ನೋಟವನ್ನು ಉಪಾಧ್ಯಕ್ಷರಾದ ಬಸಾಪುರದ ಪಂಚಾಕ್ಷರಯ್ಯ ವಿವರಿಸಿದರು.

ಇದೇ ಸಂದರ್ಭದಲ್ಲಿ ಶತಾಯುಷಿಗಳಿಗೆ ಸನ್ಮಾನವನ್ನು ಮಾಡಲಾಯಿತು. ಹಾಗೂ ಜಂಗಮ ಸಮಾಜದ ಪ್ರತಿಭ್ವಾನಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ, ಅಭಿನಂದಿಸಲಾಯಿತು.

ವೇದಿಕೆಯಲ್ಲಿ ನಿರ್ದೇಶಕರಾದ ಶ್ರೀಮತಿ ತಾರಾ, ಶ್ರೀಮತಿ ರೇಖಾ, ಶ್ರೀಮತಿ ಅಂಬಿಕಾ ಪ್ರಕಾಶ್ ಉಪಸ್ಥಿತರಿದ್ದರು.

ಆರಂಭದಲ್ಲಿ ಎಲ್.ಎಂ.ಆರ್. ಬಸವರಾಜಯ್ಯ ಸ್ವಾಗತಿಸಿದರು, ಕಾರ್ಯದರ್ಶಿ ಐನಳ್ಳಿಮಠದ ನಾಗರಾಜಯ್ಯ ನಿರೂಪಿಸಿದರೆ, ಕೊನೆಯಲ್ಲಿ ನಿರ್ದೇಶಕ ಎನ್.ಎಂ. ವೀರೇಂದ್ರ ಎಲ್ಲರನ್ನೂ ವಂದಿಸಿದರು.

# ಇ–ಕೈವೈಸಿಗೆ ಜನಸಾಗರ; ಹೆಚ್ಚುವರಿ ಸಿಬ್ಬಂದಿ ನಿಯೋಜನೆಗೆ ಕರವೇ ಒತ್ತಾಯ



ಜಗಳೂರು: ಪಡಿತರ ಚೀಟಿಯ e-KYC ಮಾಡಿಸಲು ಸಾರ್ವಜನಿಕರು ಎದುರಿಸುತ್ತಿರುವ ತೊಂದರೆ ನಿವಾರಿಸಿ, ತಾಲ್ಲೂಕು ಕಚೇರಿಯ ಆಧಾರ್ ಕೇಂದ್ರಕ್ಕೆ ಹೆಚ್ಚುವರಿ ಸಿಬ್ಬಂದಿ ನಿಯೋಜಿಸುವುದು ಹಾಗೂ ಜ–ಏಜಅಗೆ ನಿಗದಿಪಡಿಸಿರುವ ಗಡುವನ್ನು ವಿಸ್ತರಿಸುವಂತೆ ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆಯ ತಾಲ್ಲೂಕು ಘಟಕದ ವತಿಯಿಂದ ಬುಧವಾರ ತಹಶೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ತಾಲ್ಲೂಕಾಧ್ಯಕ್ಷ ಎಂ.ವೈ. ಮಹಾಂತೇಶ್ ಮಾತನಾಡಿ, ತಾಲ್ಲೂಕಿನಲ್ಲಿ ಪಡಿತರ ಚೀಟಿಯ ಜ–ಏಜಅ ಪ್ರಕ್ರಿಯೆ ನಡೆಯುತ್ತಿದ್ದು, ಹಲವು ಫಲಾನುಭವಿಗಳ ಬೆರಳಚ್ಚು ಹೊಂದಾಣಿಕೆಯಾಗದ ಕಾರಣ ಪದೇಪದೇ ಆಧಾರ್ ಕೇಂದ್ರಕ್ಕೆ ಭೇಟಿ ನೀಡಬೇಕಾಗಿದೆ.

ಇದರಿಂದ ತಾಲ್ಲೂಕು ಕಚೇರಿಯಲ್ಲಿರುವ ಆಧಾರ್ ಕೇಂದ್ರದಲ್ಲಿ ಪ್ರತಿದಿನವೂ ಭಾರಿ ಜನಸಂದಣಿ ಉಂಟಾಗುತ್ತಿದ್ದು, ಸಾರ್ವಜನಿಕರು ಗಂಟೆಗಟ್ಟಲೆ ಸರತಿ ಸಾಲಿನಲ್ಲಿ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ಕೆಲವರು ತಡರಾತ್ರಿವರೆಗೂ ಕಚೇರಿ ಆವರಣದಲ್ಲೇ ಕಾಯುತ್ತಿದ್ದು, ಊಟವನ್ನೂ ಅಲ್ಲಿಯೇ ಮಾಡಿಕೊಳ್ಳುವಂತಾಗಿದೆ. ಬೆಳಗಿನ ಜಾವ ಸುಮಾರು 2 ಗಂಟೆಯಿಂದಲೇ ಸರತಿ ಸಾಲಿನಲ್ಲಿ ನಿಲ್ಲುವ ಪರಿಸ್ಥಿತಿ ಇದೆ.

ಇದರಿಂದ ದೂರದ ಗ್ರಾಮಗಳಿಂದ ಬರುವ ವೃದ್ಧರು, ಮಹಿಳೆಯರು, ಕೂಲಿ ಕಾರ್ಮಿಕರು ಹಾಗೂ ಮಕ್ಕಳೊಂದಿಗೆ ಬರುವ ಕುಟುಂಬಗಳು ಹೆಚ್ಚಿನ ತೊಂದರೆ ಅನುಭವಿಸುತ್ತಿದ್ದಾರೆ ಎಂದರು.

ಆಧಾರ್ ಕೇಂದ್ರಕ್ಕೆ ಹೆಚ್ಚುವರಿ ಸಿಬ್ಬಂದಿ ನಿಯೋಜಿಸಿ, ಸಾರ್ವಜನಿಕರ ಸಮಸ್ಯೆಯನ್ನು ತಕ್ಷಣ ಪರಿಹರಿಸಬೇಕು. ಇಲ್ಲವಾದರೆ ಹೋರಾಟ ನಡೆಸಬೇಕಾಗುತ್ತದೆ ಎಂದು ಮಹಾಂತೇಶ್ ಎಚ್ಚರಿಸಿದರು.

ಕಸಬ ಹೋಬಳಿ ಅಧ್ಯಕ್ಷ ಸುಬೇಂದ್ರ ಮಾತನಾಡಿ, ಬೆರಳಚ್ಚು ಹೊಂದಾಣಿಕೆಯಾಗದ ಫಲಾನುಭವಿಗಳಿಗೆ ಪರ್ಯಾಯ ವ್ಯವಸ್ಥೆ ಅಥವಾ ಸೂಕ್ತ ಮಾರ್ಗದರ್ಶನ ನೀಡಬೇಕು. ಆಧಾರ್ ಕೇಂದ್ರದಲ್ಲಿನ ಜನದಟ್ಟಣೆ ನಿಯಂತ್ರಿಸಲು ಟೋಕನ್ ಹಾಗೂ ಸರತಿ ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಒತ್ತಾಯಿಸಿದರು.

ಪಡಿತರ ಚೀಟಿಯ ಜ–ಏಜಅ ಪೂರ್ಣಗೊಳಿಸಲು ನೀಡಿರುವ ಸೆ.30ರ ಗಡುವನ್ನು ವಿಸ್ತರಿಸಬೇಕು. ಗ್ರಾಮೀಣ ಭಾಗದ ಜನರಿಗೆ ಸಾಕಷ್ಟು ಕಾಲಾವಕಾಶ ನೀಡಿದರೆ ಎಲ್ಲ ಫಲಾನುಭವಿಗಳಿಗೂ ಜ–ಏಜಅ ಮಾಡಿಸಿಕೊಳ್ಳಲು ಅನುಕೂಲವಾಗಲಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಕ.ರ.ವೇ. ಗೌರವಾಧ್ಯಕ್ಷ ಸಂಗೊಳ್ಳಿ ಸುರೇಶ್, ಪದಾಧಿಕಾರಿಗಳಾದ ಮುನ್ನ, ಶಿವಣ್ಣ, ಬಂಗಾರಿಗುಡ್ಡ ಗೌಡ, ನಗರ ಘಟಕ ಅಧ್ಯಕ್ಷ ಮಂಜುನಾಥ್, ಯುವ ಘಟಕ ಅಧ್ಯಕ್ಷ ಶಿವಾಜಿ, ಉಪಾಧ್ಯಕ್ಷ ಆಫೀಜ್, ತಾಲ್ಲೂಕು ಮಹಿಳಾ ಅಧ್ಯಕ್ಷೆ ಶಾಹೀನ ಬೇಗಂ, ಜಿಲ್ಲಾ ಸಾಮಾಜಿಕ ಜಾಲತಾಣ ಅಧ್ಯಕ್ಷ ಲಿಂಗರಾಜು, ಕೆ.ಎಂ.ಜಗದೀಶ್, ತಾಲ್ಲೂಕು ರೈತ ಘಟಕದ ಅಧ್ಯಕ್ಷ ತಿಪ್ಪೇಸ್ವಾಮಿ ಬಿ., ಆನಂದ ಗೌಡ, ಮಂಜುಳ, ಪರ್ಜಾನ, ಗಾಯತ್ರಿ, ಎಂ.ಡಿ. ಅಬ್ದುಲ್ ರಕೀಬ್, ಅನಿಲ್ ಚಿಕ್ಕಬನ್ನಿಹಟ್ಟಿ, ಹನುಮಂತ, ರಾಮಸ್ವಾಮಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಒಂದನೇ ಪುಟದಿಂದ..

# ರಾಜ್ಯದ ಯಾವುದೇ ವಿಧಾನಸಭಾ ಕ್ಷೇತ್ರದಿಂದ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಲು ಸಿದ್ಧ: ಸಿದ್ದೇಶ್ವರ ಇಂಗಿತ

ಘೋಷಿಸಿದ ಸಿದ್ದೇಶ್ವರ ಅವರು, ಈ ಮೂಲಕ ದಾವಣಗೆರೆ ಲೋಕಸಭಾ ರಾಜಕಾರಣದ ಹೊರತಾಗಿ ರಾಜ್ಯ ವಿಧಾನಸಭಾ ರಾಜಕಾರಣದತ್ತ ಗಮನ ಹರಿಸಿರುವ ಸಂದೇಶ ನೀಡಿದರು.

ಆದರೆ, ಯಾವ ಕ್ಷೇತ್ರದಿಂದ ಸ್ಪರ್ಧಿಸುತ್ತೇನೆ ಅಥವಾ ಪಕ್ಷದಿಂದ ಟಿಕೆಟ್ ನೀಡುವ ಕುರಿತು ಯಾವುದೇ ಅಧಿಕೃತ ನಿರ್ಧಾರವಾಗಿಲ್ಲ. ಅಂತಿಮವಾಗಿ ನನ್ನನ್ನು ಅಭ್ಯರ್ಥಿ ಎಂದು ಆಯ್ಕೆ ಮಾಡುವ ನಿರ್ಧಾರ ಪಕ್ಷದ ವರಿಷ್ಠರು ಹಾಗೂ ರಾಜ್ಯ ನಾಯಕತ್ವಕ್ಕೆ ಬಿಟ್ಟಿದ್ದೇನೆ ಎಂದು ತಿಳಿಸಿದರು.

ಚೇತರಿಕೆ ಬಳಿಕ ರಾಜಕೀಯ ಚಟುವಟಿಕೆಗೆ ಸಿದ್ಧತೆ: ಇತ್ತೀಚೆಗೆ ಅನಾರೋಗ್ಯದಿಂದ ಬಳಲುತ್ತಿದ್ದೆ. ಈಗ ಚಿಕಿತ್ಸೆ ಪಡೆದ ಬಳಿಕ ಚೇತರಿಸಿಕೊಳ್ಳುತ್ತಿದ್ದೇನೆ. ಕಾಲಿಗೆ ಸಣ್ಣ ಶಸ್ತ್ರಚಿಕಿತ್ಸೆ ಮಾಡಿಸಿಕೊಂಡು ಸಂಪೂರ್ಣವಾಗಿ ಚೇತರಿಸಿಕೊಂಡ ಬಳಿಕ ಪಕ್ಷದ ಚಟುವಟಿಕೆಗಳಲ್ಲಿ ಮತ್ತಷ್ಟು ಸಕ್ರಿಯರಾಗುವ ವಿಶ್ವಾಸ ವ್ಯಕ್ತಪಡಿಸಿದರು.

'ಕೊನೆಯ ಉಸಿರಿನವರೆಗೂ ಬಿಜೆಪಿಯ ಕಾರ್ಯಕರ್ತ': ತಾವು ರಾಜಕೀಯದಲ್ಲಿ ತಾತ್ಕಾಲಿಕ ಸಂಚಲನ ಸೃಷ್ಟಿಸುವ 'ಬ್ರೇಕಿಂಗ್ ನ್ಯೂಸ್'ಗಳಿಗೆ ಆದ್ಯತೆ ನೀಡುವುದಿಲ್ಲ ಎಂದು ಹೇಳಿದ ಅವರು, ಕೊನೆಯ ಉಸಿರಿರುವವರೆಗೂ ಭಾರತೀಯ ಜನತಾ ಪಕ್ಷದ ಸಕ್ರಿಯ ಕಾರ್ಯಕರ್ತನಾಗಿ ಶ್ರಮಿಸುತ್ತೇನೆ. ಇನ್ನು ಮುಂದೆ ಕೇಂದ್ರ ರಾಜ–ಕಾರಣಕ್ಕೆ ಹೋಗುವುದಿಲ್ಲ. ಬದಲಾಗಿ ಲೋಕಸಭಾ ಕ್ಷೇತ್ರಕ್ಕೆ ನಮ್ಮ ಕುಟುಂಬದಲ್ಲಿ ಯಾರಿಗಾದರೂ ಟಿಕೆಟ್ ಕೊಟ್ಟರೂ ನನಗೆ ಓಕೆ. ನಾನು ಮಾತ್ರ ಲೋಕಸಭಾ ಕ್ಷೇತ್ರಕ್ಕೆ ನಿಲ್ಲುವುದಿಲ್ಲ. ಏನಿದ್ದರೂ ನನ್ನ ಚಿತ್ರ ರಾಜ್ಯ ರಾಜಕಾರಣದತ್ತ ಎಂದು ಮತ್ತೊಮ್ಮೆ ಸ್ಪಷ್ಟಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಶ್ರೀನಿವಾಸ್ ದಾಸಕರಿಬಸಪ್ಪ, ಯಶವಂತರಾವ್ ಜಾಧವ್, ಇ.ಜೀವನಮೂರ್ತಿ, ದೇವರಮನಿ ಶಿವಕುಮಾರ್, ರಾಜನಹಳ್ಳಿ ಶಿವಕುಮಾರ್, ಮುರುಗೇಶ್ ಆರಾಧ್ಯ, ದೇವೇಂದ್ರಪ್ಪ, ಲಿಂಗರಾಜ್, ಅಣಜಿ ಗುಡ್ಡೇಶ್, ವೀರೇಶ್ ಇನ್ನಿತರರಿದ್ದರು.

# ಬಡವರಿಗೆ ನಿವೇಶನ; ತಿಂಗಳಾಂತ್ಯದೊಳಗೆ ಭೂಮಿ ಗುರುತಿಸುವ ಕಾರ್ಯ ಪೂರ್ಣಗೊಳಿಸಿ: ಪರಮೇಶ್ವರ್ ಸೂಚನೆ

ಭೂ ಮಾಪನ ಮತ್ತು ಭೂ ದಾಖಲೆ ಇಲಾಖೆಯ ಆಯುಕ್ತರಾದ ವೆಂಕಟರಾಜ್ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ಭಾರತ್ ಜೋಡೋ ಯುವ ಸಂಘ ಮುಖ್ಯಮಂತ್ರಿಯವರ ಕನಸಿನ ಯೋಜನೆಯಾಗಿದೆ. ಸಂಘಗಳ ನೋಂದಣಿ, ಮೆಂಟರ್ಸ್‌ಗಳ ನೇಮಕ ಸೇರಿದಂತೆ ಸಂಘ ಪ್ರಾರಂಭಿಸುವ ಪ್ರಕ್ರಿಯೆಯನ್ನು ಮತ್ತಷ್ಟು ಚುರುಕುಗೊಳಿಸಬೇಕು.

ತಾಂತ್ರಿಕ ಸಮಸ್ಯೆ ಉಂಟಾದ ಹಿನ್ನೆಲೆಯಲ್ಲಿ ಸ್ಥಗಿತಗೊಳಿಸಲಾಗಿತ್ತು. ಕೂಡಲೇ ಅರ್ಜಿ ನಮೂನೆಗಳನ್ನು ವಿತರಿಸಿ, ಭರ್ತಿ ಮಾಡಿಸಬೇಕು. ಭಾರತ್ ಜೋಡೋ ಯುವಕ ಸಂಘ ಇಡೀ ದೇಶದಲ್ಲಿ ಮೊದಲ ಬಾರಿಗೆ ಜಾರಿಗೊಳಿಸುತ್ತಿರುವ ಕಾರ್ಯಕ್ರಮ. ಇದರಿಂದ ಸರ್ಕಾರಕ್ಕೆ ಮತ್ತು ಅಧಿಕಾರಿಗಳಿಗೆ ಒಳ್ಳೆ ಹೆಸರು ಬರಲಿದೆ ಎಂದು ತಿಳಿಸಿದರು.

ಪ್ರಜಾಸೇವಾ ಅಭಿಯಾನದಲ್ಲಿ ಹೆಚ್ಚಾಗಿ ಕಂದಾಯ ಇಲಾಖೆಗೆ ಸಂಬಂಧಿಸಿದ ಅರ್ಜಿಗಳು ಬರುತ್ತಿವೆ.

ಪಹಣಿ ತಿದ್ದುಪಡಿ, ಪೋಡಿ, ಪಿಂಚಣಿ ಸಮಸ್ಯೆ ಸೇರಿದಂತೆ ಮುಂತಾದ ಅರ್ಜಿಗಳನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡಬೇಕು. ಆರ್‌ಟಿಸಿ, ಪೋಡಿ ಪ್ರಕರಣಗಳನ್ನು ಸರಳೀಕರಣಗೊಳಿಸಲಾಗಿದೆ. ಆದಾಗ್ಯೂ ಗೊಂದಲಗಳಿದ್ದರೆ ಹಿರಿಯ ಅಧಿಕಾರಿಗಳಿಂದ ಅಗತ್ಯ ಸಲಹೆ ಪಡೆದು, ಮುಂದಿನ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

# ರಾಜ್ಯದ ಪೆಟ್ರೋಲ್ ಬಂಕ್‌ಗಳಲ್ಲಿ ತೂಕ–ಅಳತೆ ಅಕ್ರಮ



ಬೆಂಗಳೂರು: ಹೋಟೆಲ್, ಬೇಕರಿ ಬಳಿಕ ಈಗ ಪೆಟ್ರೋಲ್ ಬಂಕ್‌ಗಳಿಗೆ ಸರ್ಕಾರ ಬಿಸಿ ಮುಟ್ಟಿಸಿದೆ. ರಾಜ್ಯದ 5,946 ಪೆಟ್ರೋಲ್ ಬಂಕ್‌ಗಳ ಪೈಕಿ, 805 ಬಂಕ್‌ಗಳ ಪರೀ–ಕ್ಷೆ ನಡೆಸಲಾಗಿದ್ದು, 768 ಬಂಕ್‌ಗಳು ತೂಕ–ಅಳತೆಯಲ್ಲಿ ಅಕ್ರಮ ಮಾಡಿರೋದು ಗೊತ್ತಾಗಿದೆ.

ಬಂಕ್‌ಗಳ ವಂಚನೆ ಬಗ್ಗೆ ದೂರು ನೀಡಲು 18005991100 ಸಹಾಯವಾಣಿ ಆರಂಭಿಸಲಾಗಿದೆ. ಬಂಕ್‌ಗಳ ಮುಂದೆ ಟೋಲ್ ನಂಬರ್ ಪ್ರದರ್ಶಿಸುವುದು ಕಡ್ಡಾಯವಾಗಿದೆ.

ಈ ಮಧ್ಯೆ, ಬೆಂಗಳೂರಿನಲ್ಲಿ ಪೊಲೀಸರು ಜಪ್ತಿ ಮಾಡಿರುವ ವಾಹನಗಳನ್ನ ತೆರವು ಮಾಡುವ ಕಾರ್ಯಕ್ಕೆ ಸರ್ಕಾರ ಮುಂದಾಗಿದೆ. ಪೊಲೀಸರು ಜಪ್ತಿ ಮಾಡಿ ಹಲವು ವರ್ಷ ಕಳೆದರೂ ವಾಹನಗಳನ್ನ ತೆಗೆದುಕೊಂಡು ಹೋಗುವುದಕ್ಕೆ ಜನ ಬಂದಿಲ್ಲ. ಇದರಿಂದ ಪೊಲೀಸ್ ಠಾಣೆ ಸುತ್ತಮುತ್ತ ಜನರು ಓಡಾಟ–ಕ್ಕೆ ಕಿರಿಕಿರಿಯಾಗುತ್ತಿತ್ತು. ಹೀಗಾಗಿ ಅಂತಹ ವಾಹನಗಳನ್ನ ಸಾಗಿಸುವ ಅಭಿಯಾನಕ್ಕೆ ಸಚಿವ ಕೃಷ್ಣಬೈರೇಗೌಡ ಚಾಲನೆ ನೀಡಿದರು.

ಒಟ್ಟು 11,346 ವಾಹನಗಳು ಪೊಲೀಸ್ ಠಾಣೆ ಆವರಣದಲ್ಲಿದ್ದು ಅವುಗಳನ್ನು ತೆರವು ಮಾಡಲಾಗುತ್ತಿದೆ.

# ಗಣಪತಿ ಮೆರವಣಿಗೆ ವಿಚಾರಕ್ಕೆ ಧಮ್ಕಿ

## ಇನ್ಸ್‌ಪೆಕ್ಟರ್ ಧನಂಜಯ್ ಪರ ಯತೀಂದ್ರ ಬ್ಯಾಟಿಂಗ್





ಮೈಸೂರು: ಜಿಲ್ಲೆಯ ಟಿ.ನರಸೀಪುರ ಇನ್ಸ್‌ಪೆಕ್ಟರ್ ಧಮ್ಕಿ ವಿಚಾರದ ಬಗ್ಗೆ 5 ದಿನಗಳ ಬಳಿಕ ಜಿಲ್ಲಾ ಉಸ್ತುವಾರಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಮೌನ ಮುರಿದಿದ್ದು, ಧನಂಜಯ್ ಪರ ಬ್ಯಾಟಿಂಗ್ ಮಾಡಿದ್ದಾರೆ.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಇನ್ಸ್‌ಪೆಕ್ಟರ್ ಧನಂಜಯ್ ಯಾವುದೇ ತಪ್ಪು ಮಾಡಿಲ್ಲ. ಅವರು ಬುದ್ಧಿವಾದ ಹೇಳಿದ್ದಾರೆ. ಬುದ್ಧಿವಾದ ಹೇಳುವ ದಾಟಿ ಸ್ವಲ್ಪ ಬದಲಾಗಿದೆ ಅಷ್ಟೇ. ಅದನ್ನ ಬಿಟ್ಟು ಬೇರೆ ಯಾವುದೇ ತಪ್ಪು ಮಾಡಿಲ್ಲ. ತಪ್ಪೇ ಮಾಡದ ಇನ್ಸ್‌ಪೆಕ್ಟರ್ ಮೇಲೆ ಕ್ರಮ ಯಾಕೆ ತೆಗೆದುಕೊಳ್ಳಬೇಕು ಎಂದು ಬಲವಾಗಿ ಸಮರ್ಥಿಸಿಕೊಂಡಿದ್ದಾರೆ.

ಮಸೀದಿ ಮುಂದೆ ಯಾಕೆ ಪಟಾಕಿ ಹೊಡೆಯಬೇಕು? ನಮ್ಮ ದೇವಸ್ಥಾನದ ಮುಂದೆ ಅವರು ಬಂದು ಪಟಾಕಿ ಹೊಡೆದರೆ ನಾವು ಸುಮ್ಮನಿರುತ್ತೇವಾ? ಚರ್ಚ್, ಮಸೀದಿ, ದೇವಸ್ಥಾನ ಮುಂದೆ ಪಟಾಕಿ ಹೊಡೆಯಬಹುದು ಅಂತ ಎಲ್ಲಿದೆ ಕಾನೂನು? ಯಾರೇ ತಪ್ಪು ಮಾಡಿದರೂ ತಪ್ಪೇ. ಈ ನಿಯಮ ಎಲ್ಲಾ ಧರ್ಮದವರಿಗೂ ಅನ್ವಯವಾಗುತ್ತದೆ. ಅನುಮತಿ ಪಡೆದುಕೊಂಡೇ ಮೆರವಣಿಗೆ ಹೋಗಬೇಕು. ಯಾವ ರಸ್ತೆಗೆ ಬೇಕಾದರೂ ಹೋಗಲು ಅನುಮತಿ ಇಲ್ಲದೆ ಬಿಡಲು ಆಗಲ್ಲ. ಅನುಮತಿ ಪಡೆದುಕೊಂಡರೆ ಪೊಲೀಸರು ಭದ್ರತೆ ಮಾಡಿಕೊಡುತ್ತಾರೆ. ಅನುಮತಿ ಇಲ್ಲದೆ ಹೋಗಿ ಏನಾದರೂ ಹೆಚ್ಚು–ಕಡಿಮೆ ಆದರೆ ಯಾರು ಹೊಣೆ? ಎಂದು ಪ್ರಶ್ನಿಸಿದ್ದಾರೆ.

ಬಿಜೆಪಿಯವರು ರಣಹದ್ದುಗಳಂತೆ ಕೋಮು ಗಲಭೆ ಆಗುವುದನ್ನೇ ಕಾಯುತ್ತಾರೆ. ಕೋಮುಗಲಭೆ ಆಗಬೇಕು, ಯಾರದ್ದಾದರೂ ಸಾವಾಗಬೇಕು. ಅದರ ಲಾಭ ಬಿಜೆಪಿ ಪಡೆಯಬೇಕು ಎನ್ನುವುದೇ ಬಿಜೆಪಿಯವರ ಪ್ಲ್ಯಾನ್. ಯಾವುದೇ ಕಡೆ ಕೋಮು ಗಲಭೆಯಾದರೂ ಅದರ ಚುನಾವಣಾ ಲಾಭ ಬಿಜೆಪಿಗೆ ಆಗಿದೆ. ಹೀಗಾಗಿ ಬಿಜೆಪಿಗೆ ಕೋಮು ಗಲಭೆ ಬಗ್ಗೆ ಆಸಕ್ತಿ ಜಾಸ್ತಿ. ನರಸೀಪುರದಲ್ಲಿ ಅದೇ ಕೆಲಸ ಮಾಡಲು ಬಂದಿದ್ದಾರೆ ಎಂದು ಕಿಡಿಕಾರಿದ್ದಾರೆ.

ಒಂದನೇ ಪುಟದಿಂದ..

## ಯುಪಿಐ ಶುಲ್ಕ ನಿಯಮ; ಟ್ರಂಪ್ ಮುಂದೆ ಶರಣಾಗಬೇಡಿ;

# ಮೋದಿ ವಿರುದ್ಧ ರಾಹುಲ್ ಕಿಡಿ

ಇಲ್ಲ, ಡೊನಾಲ್ಡ್ ಟ್ರಂಪ್ ಮುಂದೆ ಸಂಪೂರ್ಣವಾಗಿ ಅಡ್ಡಬಿದ್ದು ಶರಣಾಗಲು ನಿರ್ಧರಿಸಿದ್ದಾರೆ" ಎಂದು ರಾಹುಲ್ ಗಾಂಧಿ ಟೀಕಿಸಿದ್ದಾರೆ.

ಯುಪಿಐ ವಹಿವಾಟುಗಳ ಮೇಲೆ ಶುಲ್ಕ ವಿಧಿಸುವ ಮೂಲಕ ಭಾರತೀಯರ ಜೇಬಿಗೆ ಕನ್ನಹಾಕಿ, ಅಮೆರಿಕನ್ ಸಂಸ್ಥೆಗಳಿಗೆ ಹಾಗೂ ಅಮೆರಿಕಕ್ಕೆ ಅಪಾರ ಪ್ರಮಾಣದ ಹಣ ಹರಿದುಹೋಗುವಂತೆ ಮಾಡಲಾಗುತ್ತಿದೆ. ಅಮೆರಿಕದ ಎದುರು ಸಾಷ್ಟಾಂಗ ನಮಸ್ಕಾರ ಮಾಡುವುದನ್ನು ನಿಲ್ಲಿಸಿ, ಸ್ವಲ್ಪ ಬೆನ್ನೆಲುಬು ಪ್ರದರ್ಶಿಸಿ ದೇಶದ ಜನರ ಮೇಲಿನ ಈ ಹೊಸ ಯುಪಿಐ ಶುಲ್ಕವನ್ನು ತಕ್ಷಣವೇ ಹಿಂಪಡೆಯಬೇಕು ಎಂದು ರಾಹುಲ್ ಗಾಂಧಿ ಆಗ್ರಹಿಸಿದ್ದಾರೆ.

ರಾಷ್ಟ್ರೀಯ ಪಾವತಿ ನಿಗಮದ ಅಧಿಸೂಚನೆ ಪ್ರಕಾರ, 2,000 ರೂ.ಗಿಂತ ಹೆಚ್ಚಿನ ವ್ಯಾಪಾರಿ ವಹಿವಾಟುಗಳ ಮೇಲೆ ಶೇ. 0.4ರಷ್ಟು MDR ಶುಲ್ಕ ಅನ್ವಯಿಸಲಿದೆ. 75,000 ರೂ. ಮತ್ತು ಅದಕ್ಕಿಂತ ಹೆಚ್ಚಿನ ದೊಡ್ಡ ವಹಿವಾಟುಗಳಿಗೆ ಈ ಶುಲ್ಕವನ್ನು ಗರಿಷ್ಠ 300 ರೂ.ಗೆ ಸೀಮಿತಗೊಳಿಸಲಾಗಿದೆ.

ಈ ಶುಲ್ಕವನ್ನು ನೇರವಾಗಿ ಗ್ರಾಹಕರಿಂದ ವಸೂಲಿ ಮಾಡುವುದಿಲ್ಲ. ಬದಲಾಗಿ ವ್ಯಾಪಾರಿಗಳೇ ಪಾವತಿಸಬೇಕಾಗುತ್ತದೆ. ವ್ಯಕ್ತಿಯಿಂದ ವ್ಯಕ್ತಿಗೆ ನಡೆಯುವ ಸಾಮಾನ್ಯ ಯುಪಿಐ ಪಾವತಿಗಳು ಉಚಿತವಾಗಿರಲಿವೆ ಎಂದು ಕೇಂದ್ರ ಸ್ಪಷ್ಟಪಡಿಸಿದೆ.

ಆದರೆ, ಸರ್ಕಾರ ಗ್ರಾಹಕರಿಂದ ನೇರವಾಗಿ ಶುಲ್ಕ ವಸೂಲಿ ಮಾಡುವುದಿಲ್ಲ ಎಂದಿದ್ದರೂ, ವ್ಯಾಪಾರಿಗಳು ವಸ್ತುಗಳ ಬೆಲೆ ಹೆಚ್ಚಿಸುವ ಮೂಲಕ ಈ ವೆಚ್ಚವನ್ನು ಅಂತಿಮವಾಗಿ ಗ್ರಾಹಕರ ಮೇಲೆಯೇ ಹೊರಿಸಬಹುದು ಎಂದು ವಿರೋಧ ಪಕ್ಷಗಳು ಆರೋಪಿಸಿವೆ.

# ಆಸ್ತಿ ವಿವಾದ : ಗ್ರಾಮ ಪಂಚಾಯ್ತಿಗೆ ಬಂದಿದ್ದ ತಂದೆ–ಮಗಳ ಬರ್ಬರ ಹತ್ಯೆ

38 ಗುಂಟೆ ಆಸ್ತಿ ರುದ್ರಪ್ಪನ ಹೆಸರಿನಲ್ಲಿದ್ದು ಮೂವರು ಸಹೋದರರಿಗೂ ಸಮನಾಗಿ ಹಂಚುವಂತೆ ಕೋರ್ಟ್ ಆದೇಶ ಹೊರಡಿಸಿತ್ತು.

ಇನ್ನು ರುದ್ರಪ್ಪ ನನ್ನ ಪಾಲಿನ ಜಮೀನನ್ನು ಮೊದಲೇ ಮಾರಾಟ ಮಾಡಿಕೊಂಡಿದ್ದು ಉಳಿದ ಜಮೀನಿನಲ್ಲೂ ತನಗೆ ಪಾಲು ಬೇಕು ಎಂದು ಪಟ್ಟು ಹಿಡಿದಿದ್ದರು. ಇದರಿಂದ ಆಕ್ರೋಶಗೊಂಡಿದ್ದ ಸಹೋದರರು ಗ್ರಾಮ ಪಂಚಾಯತಿ ಕಚೇರಿಗೆ ಅರ್ಜಿ ಸಲ್ಲಿಸಲು ಬಂದಿದ್ದ ಅಣ್ಣ ರುದ್ರಪ್ಪ ಹಾಗೂ ಪುತ್ರಿ ಶಶಿಕಲಾಳನ್ನು ಕಚೇರಿಯಲ್ಲೇ ಮಾರಕಾಸ್ತ್ರಗಳಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿದ್ದಾರೆ.

ಪ್ರಿಯ ಓದುಗರೇ ಅನಂತ ಜನಶಕ್ತಿ ಕನ್ನಡ ದಿನ ಪತ್ರಿಕೆಯನ್ನು ತಪ್ಪದೇ ಓದಿರಿ

# ತಂತ್ರಜ್ಞಾನ ಕ್ಷೇತ್ರದಲ್ಲಿ ಸರ್ ಎಂ.ವಿ. ಕೊಡುಗೆ ಅಪಾರ: ಮಹಾಬಲೇಶ್ವರ




ಬಳ್ಳಾರಿ : ಕನ್ನಡ ನಾಡಿನ ಅಭಿವೃದ್ಧಿಗೆ ಮಾತ್ರವಲ್ಲದೆ ಇಡೀ ದೇಶದ ಅಭಿವೃದ್ಧಿ ಕ್ಷೇತ್ರದಲ್ಲಿಯೂ ಸರ್ ಎಂ. ವಿಶ್ವೇಶ್ವರಯ್ಯ ಅವರು ಅಪಾರ ಕೊಡುಗೆ ನೀಡಿ-ದ್ದಾರೆ ಎಂದು ಆರ್.ವೈ.ಎಂ. ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲ ಡಾ. ಎಚ್. ಮಹಾಬಲೇಶ್ವರ ಹೇಳಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ರಾಷ್ಟ್ರೀಯ ಬಸವದಳದ ಸಂಯುಕ್ತ ಆಶ್ರಯದಲ್ಲಿ ಬಸವದಳ ಸಭಾಂಗಣದಲ್ಲಿ ನಡೆದ ಸರ್ ಎಂ. ವಿಶ್ವೇಶ್ವರಯ್ಯ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ತಂತ್ರಜ್ಞಾನ ಮತ್ತು ಇಂಜಿನಿಯರಿಂಗ್ ಕ್ಷೇತ್ರದಲ್ಲಿ ವಿಶ್ವೇಶ್ವರಯ್ಯ ಅವರು ತೋರಿದ ದೂರದೃಷ್ಟಿ ಹಾಗೂ ಕಾರ್ಯಕ್ಷಮತೆ ಇಂದಿಗೂ ಮಾದರಿಯಾಗಿದೆ ಎಂದರು.

ಸರ್ ಎಂ. ವಿಶ್ವೇಶ್ವರಯ್ಯ ಅವರು ಕೇವಲ ಒಬ್ಬ ಪ್ರತಿಭಾವಂತ ಇಂಜಿನಿಯರ್ ಆಗಿರದೆ, ಕರ್ನಾಟಕದ ಸಮಗ್ರ ಅಭಿವೃದ್ಧಿಯ ಬಗ್ಗೆ ದೂರದೃಷ್ಟಿಯ ಚಿಂತನೆ ಹೊಂದಿದ್ದ ಅಭಿವೃದ್ಧಿಯ ಹರಿಕಾರರಾಗಿದ್ದರು. ಕನ್ನಡ ಸಾಹಿತ್ಯ ಪರಿಷತ್, ಮೈಸೂರು ಬ್ಯಾಂಕ್, ಎಚ್ಎಎಲ್, ಕನ್ನಂಬಾಡಿ ಅಣೆಕಟ್ಟು ಹಾಗೂ ಭದ್ರಾವತಿ ಉಕ್ಕಿನ ಕಾರ್ಖಾನೆ ಸೇರಿದಂತೆ ಹಲವು ಪ್ರಮುಖ ಸಂಸ್ಥೆಗಳು ಮತ್ತು ಕೈಗಾರಿಕೆಗಳ ಸ್ಥಾಪನೆ ಹಾಗೂ ಅಭಿವೃದ್ಧಿಯಲ್ಲಿ ಅವರು ಮಹತ್ವದ ಪಾತ್ರ ವಹಿಸಿದ್ದರು. ಆ ಕಾಲದಲ್ಲಿಯೇ ಕೈಗಾರಿಕೆ, ನೀರಾವರಿ, ಶಿಕ್ಷಣ ಹಾಗೂ ತಂತ್ರಜ್ಞಾನ ಕ್ಷೇತ್ರಗಳ ಅಭಿವೃದ್ಧಿಗೆ ಒತ್ತು ನೀಡುವ ಮೂಲಕ ರಾಜ್ಯದ ಭವಿಷ್ಯದ ಬಗ್ಗೆ ಅವರು ರೂಪಿಸಿದ್ದ ಕಲ್ಪನೆಗಳು ಗಮನಾರ್ಹವಾಗಿವೆ ಎಂದು ಡಾ. ಮಹಾಬಲೇಶ್ವರ ತಿಳಿಸಿದರು.

ಇಂಜಿನಿಯರ್ ಟಿ. ಮಲ್ಲಿಕಾರ್ಜುನ ವಿಶೇಷ ಉಪನ್ಯಾಸ ನೀಡಿ, ಸರ್ ಎಂ. ವಿಶ್ವೇಶ್ವರಯ್ಯ ಅವರ ಜೀವನ ಮತ್ತು ಸಾಧನೆಗಳು ದೇಶದ ಎಲ್ಲ ವಿಭಾಗಗಳ ತಾಂತ್ರಿಕ ಪರಿಣಿತರು ಹಾಗೂ ಯುವ ಇಂಜಿನಿಯರ್‌ಗಳಿಗೆ ಆದರ್ಶವಾಗಿವೆ ಎಂದರು. ತಾಂತ್ರಿಕ ಜ್ಞಾನವನ್ನು ಕೇವಲ ವೈಯಕ್ತಿಕ ಪ್ರಗತಿಗೆ ಬಳಸದೆ, ಸಮಾಜ ಹಾಗೂ ದೇಶದ ಅಭಿವೃದ್ಧಿಗೆ ಬಳಸಬೇಕು ಎಂಬುದನ್ನು ವಿಶ್ವೇಶ್ವರಯ್ಯ ಅವರ ಜೀವನ ತೋರಿಸಿಕೊಟ್ಟಿದೆ. ಅವರ ಶಿಸ್ತು, ಕಾರ್ಯನಿಷ್ಠೆ, ಸಮಯಪಾಲನೆ ಮತ್ತು ಹೊಸತನದ ಚಿಂತನೆಗಳನ್ನು ಇಂದಿನ ಯುವಜನತೆ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕೆಪಿಟಿಸಿಎಲ್ ಸೂಪರಿಂಟೆಂಡೆಂಟ್ ಇಂಜಿನಿಯರ್ ತಿಪ್ಪೇರುದ್ರ ಗುಂಡೇಗೌಡರ ಮಾತನಾಡಿ, ವಿಶ್ವೇಶ್ವರಯ್ಯ ಅವರು ಭಾರತದಲ್ಲಷ್ಟೇ ಅಲ್ಲದೆ ದೇಶ-ವಿದೇಶಗಳಲ್ಲಿಯೂ ತಮ್ಮ ತಾಂತ್ರಿಕ ಜ್ಞಾನ ಹಾಗೂ ಪ್ರತಿಭೆಯನ್ನು ಅನಾವರಣಗೊಳಿಸಿದ್ದರು. ಇಂಜಿನಿಯರಿಂಗ್ ಕ್ಷೇತ್ರದಲ್ಲಿ ಅವರು ಸಾಧಿಸಿದ ಯಶಸ್ಸು ಮತ್ತು ದೇಶದ ಅಭಿವೃದ್ಧಿಗೆ ನೀಡಿದ ಕೊಡುಗೆ ಅವರನ್ನು ನಿಜವಾದ ಭಾರತ ರತ್ನವಾಗಿ ಗುರುತಿಸುವಂತೆ ಮಾಡಿದೆ. ಅವರ ಜೀವನ ಹಾಗೂ ಸಾಧನೆಗಳು ಪ್ರತಿಯೊಬ್ಬರಿಗೂ ಸ್ಫೂರ್ತಿಯಾಗಿದೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಇಂಜಿನಿಯರ್ ಕೇಣಿ ಬಸಪ್ಪ ಮಾತನಾಡಿದರು.

# ನಕ್ಸಲ್ ಹೆಸರಿನಲ್ಲಿ ಗ್ರಾಮಸ್ಥರಿಗೆ ಬೆದರಿಕೆ:

## ಕೊನೆಗೂ ಪೊಲೀಸರ ಬಲೆಗೆ 'ಸುಡೋ ನಕ್ಸಲ್' ವೆಂಕಟೇಶ್!



ಪಾವಗಡ: ಕಳೆದ ಹಲವು ತಿಂಗಳಿಂದ ಪಾವಗಡ ಪೊಲೀಸರಿಗೆ ತಲೆನೋವಾಗಿ ಪರಿಣಮಿಸಿದ್ದ, ನಕ್ಸಲ್ ಹೆಸರಿನಲ್ಲಿ ಕನಿಕಲಬಂಡೆ ಸೇರಿದಂತೆ ಸುತ್ತಮುತ್ತಲಿನ ಗ್ರಾಮಸ್ಥರಿಗೆ ಬೆದರಿಕೆ ಹಾಕುತ್ತಿದ್ದ ಉಪ್ಪಾರ್ ವೆಂಕಟೇಶ್ ಅಲಿಯಾಸ್ 'ಸುಡೋ ನಕ್ಸಲ್' ವೆಂಕಟೇಶ್ ಕೊನೆಗೂ ಪೊಲೀಸರ ಬಲೆಗೆ ಬಿದ್ದಿದ್ದಾನೆ.

ಪಾವಗಡ ಸಮೀಪದ ಕಡಮಲಕುಂಟೆ ಬೆಟ್ಟದ ತಪ್ಪಲಿನಲ್ಲಿ ಮಂಗಳವಾರ ರಾತ್ರಿ 11 ಗಂಟೆ ಸುಮಾರಿಗೆ ಎಣ್ಣೆ ಹೊಡೆಯುತ್ತಾ ಚಿಕನ್ ಸೇವಿಸುತ್ತಿದ್ದ ವೇಳೆ ಪೊಲೀಸರು ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಿದ್ದಾರೆ ಎನ್ನಲಾಗಿದೆ.

ಆರೋಪಿ ಕಳೆದ ಕೆಲ ತಿಂಗಳಿಂದ ಕನಿಕಲಬಂಡೆ ಗ್ರಾಮದಲ್ಲಿ ದೌರ್ಜನ್ಯ ಹಾಗೂ ಬೆದರಿಕೆ ಹಾಕುತ್ತಿದ್ದ ಆರೋಪ ಎದುರಿಸುತ್ತಿದ್ದಾನೆ. ಆ.29ರಂದು ರೈತ ಕ-ರಿಯಣ್ಣ ಅವರ ಪಂಪ್‌ಸೆಟ್‌ಗೆ ನಾಡಬಾಂಬ್ ಇಟ್ಟು ಹತ್ಯೆಗೆ ಯತ್ನಿಸಿದ ಪ್ರಕರಣದಲ್ಲೂ ಈತನ ಹೆಸರು ಕೇಳಿಬಂದಿದೆ. ಇತ್ತೀಚೆಗೆ ಗಂಗಸಾಗರ ಗ್ರಾಮದ ರೈತನಿಗೆ 'ಪೀಪಲ್ಸ್ ವಾರ್ ದಳಂ' ಹೆಸರಿನಲ್ಲಿ 5 ಲಕ್ಷಕ್ಕೆ ಬೇಡಿಕೆ ಪತ್ರ ಅಂಟಿಸಿದ ಪ್ರಕರಣದಲ್ಲೂ ಈತನ ಕೈವಾಡವಿರಬಹುದು ಎಂಬ ಶಂಕೆ ವ್ಯಕ್ತವಾಗಿತ್ತು.

ಅಡಿಷನಲ್ ಎಸ್‌ಪಿ ಗೋಪಾಲಯ್ಯ ಮಾರ್ಗದರ್ಶನದಲ್ಲಿ, ಡಿವೈಎಸ್ಪಿ ಮಂಜುನಾಥ್ ನೇತೃತ್ವದಲ್ಲಿ ಪಾವಗಡ ಇನ್ಸ್‌ಪೆಕ್ಟರ್ ಸುರೇಶ್, ಗ್ರಾಮಾಂತರ ಇನ್ಸ್‌ಪೆಕ್ಟರ್ ಕೊಟ್ರೇಶ್, ಎಸ್‌ಐ ಸುನಿಲ್ ಹಾಗೂ ಸಿಬ್ಬಂದಿ ಕಾರ್ಯಾಚರಣೆ ನಡೆಸಿದ್ದಾರೆ. ಬಂಧನದಿಂದ ಕನಿಕಲಬಂಡೆ ಗ್ರಾಮಸ್ಥರು ನಿಟ್ಟುಸಿರು ಬಿಟ್ಟಿದ್ದು, ಆರೋಪಿಯನ್ನು ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.

ಈತನನ್ನ ಮಂಗಳವಾರ ಮಧ್ಯರಾತ್ರಿ ಪಾವಗಡ ಸಾರ್ವಜನಿಕ ಆಸ್ಪತ್ರೆಗೆ ಕರದೊಯ್ದು ವೈದ್ಯಕೀಯ ತಪಾಸನೆ ನಡೆಸಿ ರಾತ್ರಿ ಇಡೀ ಆಸ್ಪತ್ರೆಯಲ್ಲಿ ಇರಿಸಲಾಗಿತ್ತು, ನಂತರ ಪಾವಗಡ ಪೊಲೀಸ್ ಠಾಣೆಗೆ ಕರೆದೊಯ್ದಿದ್ದಾರೆ ಬಳಿಕ ಅಲ್ಲಿಂದ ಸ್ಥಳ ಮಹಜರು ನಡೆಸಲು ಕನಿಕಲಬಂಡೆ, ಗಂಗಸಾಗರ ಗ್ರಾಮಗಳಿಗೆ ಕರೆದುಕೊಂಡು ಹೋಗಿದ್ದರು.

# ಗೌರಿ ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಮದ್ಯ ಮಾರಾಟ ನಿಷೇಧ



ಬಳ್ಳಾರಿ : 2026ನೇ ಸಾಲಿನ ಗೌರಿ ಗಣೇಶ ಹಬ್ಬ ಹಾಗೂ ಗಣೇಶ ವಿಸರ್ಜನೆ ಮೆರವಣಿಗೆಗಳು ಶಾಂತಿಯುತವಾಗಿ ನಡೆಯುವಂತೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಬಳ್ಳಾರಿ ಜಿಲ್ಲೆಯ ವಿವಿಧ ಪ್ರದೇಶಗಳಲ್ಲಿ ನಿಗದಿತ ದಿನಾಂಕಗಳಂದು ಮದ್ಯ ಮಾರಾಟ, ಸಾಗಾಣಿಕೆ ಹಾಗೂ ಬಾರ್ ಮತ್ತು ರೆಸ್ಟೋರೆಂಟ್‌ಗಳನ್ನು ಮುಚ್ಚುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಆದೇಶ ಹೊರಡಿಸಿದ್ದಾರೆ.ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21ರ ಅಡಿಯಲ್ಲಿ ಈ ಆದೇಶ ಹೊರಡಿಸಲಾಗಿದೆ. ಜಿಲ್ಲಾ ಪೊಲೀಸ್ ಅಧೀಕ್ಷಕರ ವರದಿ ಆಧರಿಸಿ ಮುನ್ನೆಚ್ಚರಿಕಾ ಕ್ರಮವಾಗಿ ಈ ನಿರ್ಧಾರ ಕೈಗೊಳ್ಳಲಾಗಿದೆ.ಸೆಪ್ಟೆಂಬರ್ 16ರ ಬೆಳಿಗ್ಗೆ 6ರಿಂದ ಸೆಪ್ಟೆಂಬರ್ 17ರ ಬೆಳಿಗ್ಗೆ 6ರವರೆಗೆ ಜಿಲ್ಲೆಯಾದ್ಯಂತ, ಸೆಪ್ಟೆಂಬರ್ 18ರ ಬೆಳಿಗ್ಗೆ 6ರಿಂದ ಸೆಪ್ಟೆಂಬರ್ 19ರ ಬೆಳಿಗ್ಗೆ 6ರವರೆಗೆ ಜಿಲ್ಲೆಯಾದ್ಯಂತ ಮದ್ಯ ನಿಷೇಧ ಜಾರಿಯಲ್ಲಿರಲಿದೆ.ಸೆಪ್ಟೆಂಬರ್ 20ರ ಬೆಳಿಗ್ಗೆ 6ರಿಂದ ಸೆಪ್ಟೆಂಬರ್ 21ರ ಬೆಳಿಗ್ಗೆ 6ರವರೆಗೆ ಬಳ್ಳಾರಿ ನಗರದಲ್ಲಿ, ಸೆಪ್ಟೆಂಬರ್ 24ರ ಬೆಳಿಗ್ಗೆ 6ರಿಂದ ಸೆಪ್ಟೆಂಬರ್ 25ರ ಬೆಳಿಗ್ಗೆ 6ರವರೆಗೆ ಸಿರುಗುಪ್ಪ ನಗರ ಹಾಗೂ ಸುತ್ತಮುತ್ತಲಿನ 10 ಕಿ.ಮೀ. ವ್ಯಾಪ್ತಿಯಲ್ಲಿ ನಿಷೇಧ ಜಾರಿಯಲ್ಲಿರಲಿದೆ.ಸೆಪ್ಟೆಂಬರ್ 26ರ ಬೆಳಿಗ್ಗೆ 6ರಿಂದ ಸೆಪ್ಟೆಂಬರ್ 27ರ ಬೆಳಿಗ್ಗೆ 6ರವರೆಗೆ ಕಂಪ್ಲಿ ಪಟ್ಟಣ ಹಾಗೂ ಸುತ್ತಮುತ್ತಲಿನ 10 ಕಿ.ಮೀ. ವ್ಯಾಪ್ತಿ ಮತ್ತು ತೆಕ್ಕಲಕೋಟೆ ಪಟ್ಟಣದಲ್ಲಿ ಮದ್ಯ ಮಾರಾಟ ನಿಷೇಧಿಸಲಾಗುವುದು. ಡಿಸ್ಟಿಲರಿಗಳಿಂದ ರಾಜ್ಯದ ವಿವಿಧ ಕೆಎಸ್‌ಬಿಸಿಎಲ್ ಡಿಪೋಗಳಿಗೆ ದಾಸ್ತಾನು ಸಾಗಿಸುವುದಕ್ಕೆ ಈ ಆದೇಶ ಅನ್ವಯಿಸುವುದಿಲ್ಲ ಎಂದು ಜಿಲ್ಲಾಧಿಕಾರಿ ಸ್ಪಷ್ಟಪಡಿಸಿದ್ದಾರೆ.

# ಉದ್ಯೋಗ ಪಡೆಯಲು ಕೌಶಲ್ಯಾಭಿವೃದ್ಧಿ ಅತ್ಯಗತ್ಯ

## ಹೊಸ ಕೌಶಲ್ಯಗಳನ್ನು ಕಲಿಯಬೇಕು: ಶಾಸಕ ನಾರಾ ಭರತ್ ರೆಡ್ಡಿ



ಬಳ್ಳಾರಿ : ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಕೇವಲ ಶೈಕ್ಷಣಿಕ ಅರ್ಹತೆ ಹೊಂದಿರುವುದು ಸಾಕಾಗುವುದಿಲ್ಲ. ಉದ್ಯೋಗ ಪಡೆಯಲು ವೃತ್ತಿಪರ ಕೌಶಲ್ಯಗಳನ್ನು ಬೆಳೆಸಿಕೊಳ್ಳುವುದು ಅಗತ್ಯ ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು. ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಕೌಶಲ್ಯಾಭಿವೃದ್ಧಿ ಕೇಂದ್ರದ ವತಿಯಿಂದ ಆಯೋಜಿಸಿದ್ದ ಕೌಶಲ್ಯ ತರಬೇತಿ ಪ್ರಮಾಣಪತ್ರ ವಿತರಣೆ ಹಾಗೂ ನೂತನ ಉದ್ಯೋಗ ಮಾಹಿತಿ ಅಂತರ್ಜಾಲ ತಾಣದ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಿರಂತರವಾಗಿ ಕೌಶಲ್ಯಗಳನ್ನು ಕಲಿಯುವ ಮೂಲಕ ಕಾರ್ಯಕ್ಷೇತ್ರದಲ್ಲಿ ನೈಪುಣ್ಯತೆ ಸಾಧಿಸಿ ಆರ್ಥಿಕವಾಗಿ ಸಬಲರಾಗಬಹುದು ಎಂದು ಹೇಳಿದರು.

ಸಂಜೀವರಾಯನಕೋಟೆ ಸಮೀಪ 600 ಎಕರೆ ಪ್ರದೇಶದಲ್ಲಿ ರೂ.5,000 ಕೋಟಿ ಬಂಡವಾಳದೊಂದಿಗೆ ಅಂತಾರಾಷ್ಟ್ರೀಯ ಮಟ್ಟದ ಜೀನ್ಸ್ ಉಡುಪುಗಳ ಕೈಗಾರಿಕಾ ಉದ್ಯಾನವನ ಸ್ಥಾಪಿಸುವ ಯೋಜನೆ ಇದೆ. ಈ ಯೋಜನೆಯಿಂದ ಸೃಷ್ಟಿಯಾಗುವ ಉದ್ಯೋಗಗಳಲ್ಲಿ ಶೇ.80ರಷ್ಟು ಅವಕಾಶಗಳನ್ನು ಬಳ್ಳಾರಿ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಸ್ಥಳೀಯ ಯುವಜನರಿಗೆ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

# ಸೆ.17ರಂದು ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ

ಬಳ್ಳಾರಿ : ಜಿಲ್ಲಾ ಆಡಳಿತದ ವತಿಯಿಂದ ಸೆಪ್ಟೆಂಬರ್ 17ರಂದು ಬೆಳಿಗ್ಗೆ 9 ಗಂಟೆಗೆ ನಗರದ ಸರ್ಕಾರಿ ಪದವಿಪೂರ್ವ ಕಾಲೇಜು ಮೈದಾನದಲ್ಲಿ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಕಾರ್ಯಕ್ರಮ ನಡೆಯಲಿದೆ.ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವ ಟಿ. ರಘುಮೂರ್ತಿ ಧ್ವಜಾರೋಹಣ ನೆರವೇರಿಸಲಿದ್ದು, ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅಧ್ಯಕ್ಷತೆ ವಹಿಸಲಿದ್ದಾರೆ.ಕಾರ್ಯಕ್ರಮದಲ್ಲಿ ಸಂಸದರಾದ ಈ. ತುಕಾರಾಂ, ಕೆ. ರಾಜಶೇಖರ ಬಸವರಾಜ ಹಿಟ್ನಾಳ್, ರಾಜ್ಯಸಭಾ ಸದಸ್ಯ ಡಾ. ಸೈಯದ್ ನಾಸೀರ್ ಹುಸೇನ್ ಸೇರಿದಂತೆ ಹಲವು ಜನಪ್ರತಿನಿಧಿಗಳು ಹಾಗೂ ಗಣ್ಯರು ಭಾಗವಹಿಸಲಿದ್ದಾರೆ.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಹೋರಾಟ ಸಮಿತಿಯ ಗೌರವಾಧ್ಯಕ್ಷ ಸಿರಿಗೇರಿ ಪನ್ನರಾಜ್ ಅವರು ವಿಶೇಷ ಉಪನ್ಯಾಸ ನೀಡಲಿದ್ದಾರೆ. ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ., ಪೊಲೀಸ್ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ ಹಾಗೂ ಮಹಾನಗರ ಪಾಲಿಕೆ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿರಲಿದ್ದಾರೆ.

ಒಂದನೇ ಪುಟದಿಂದ..

# ಸತೀಶ್ ಜಾರಕಿಹೊಳಿ ಎಸ್‌ಟಿ ನಾಯಕ ಎಂಬ ಕಾರಣಕ್ಕಾಗಿ

## ಇ.ಡಿ ದಾಳಿ ನಡೆದಿದೆ: ಸುರ್ಜೇವಾಲ

ಪ್ರತಿಪಾದಿಸಿದ್ದಾರೆ.

ಕರ್ನಾಟಕದಲ್ಲಿ ಅಧಿಕೃತ ಕಾರ್ಯಕ್ರಮಗಳಲ್ಲಿ ವಂದೇ ಮಾತರಂ ಅನ್ನು ಎರಡು ಚರಣಗಳಿಗೆ ಸೀಮಿತಗೊಳಿಸುವ ರಾಜ್ಯ ಕಾಂಗ್ರೆಸ್ ಸರ್ಕಾರದ ನಿರ್ಧಾರವನ್ನು ರಾಜ್ಯಸಭಾ ಸಂಸದರು ಸಮರ್ಥಿಸಿಕೊಂಡಿದ್ದಾರೆ. 'ಹಿರಿಯ ಕಾಂಗ್ರೆಸ್ ನಾಯಕರನ್ನು, ವಿಶೇಷವಾಗಿ ಎಸ್‌ಸಿ/ಎಸ್‌ಟಿ ನಾಯಕರ ವಿರುದ್ಧ ಬಿಜೆಪಿ ಸೇಡಿನ ಮನೋಭಾವದಿಂದ ಬೇಟೆಯಾಡಿ ವಿಚಾರಣೆಗೆ ಒಳಪಡಿಸುವ ಕಥೆ ಈಗ ಹಳತಾಗಿದೆ. ಕೇಂದ್ರದ ಬಿಜೆಪಿ ಸರ್ಕಾರವು ಸತೀಶ್ ಜಾರಕಿಹೊಳಿ ಅವರನ್ನು ಎರಡನೇ ಬಾರಿಗೆ ಗುರಿಯಾಗಿಸಿಕೊಂಡಿದೆ. ಬಿಜೆಪಿ ರಾಜ್ಯ ನಾಯಕರು ಜಾರಕಿಹೊಳಿ ವಿರುದ್ಧ ದ್ವೇಷ ಸಾಧಿಸುತ್ತಿದ್ದಾರೆ ಮತ್ತು ಅವರು ದೆಹಲಿಯಲ್ಲಿರುವ ತಮ್ಮ ಯಜಮಾನರಿಗೆ

ಜಾರಕಿಹೊಳಿ ಮೇಲೆ ದಾಳಿ ಮಾಡಲು ಹೇಳುತ್ತಿದ್ದಾರೆ. ಏಕೆಂದರೆ ಅವರು ರಾಜ್ಯದ ಅತ್ಯಂತ ದೊಡ್ಡ ಎಸ್‌ಟಿ ನಾಯಕ ಮತ್ತು ಬಡ ಸಮುದಾಯಗಳ ನಾಯಕರಾಗಿದ್ದಾ-ರೆ ಮತ್ತು ಅವರು ರಾಜ್ಯದ ಹೊರಗೆ ನೆರೆಯ ರಾಜ್ಯಗಳಲ್ಲಿಯೂ ಗುರುತಿಸಲ್ಪಟ್ಟಿದ್ದಾರೆ' ಎಂದು ಜಾರಿ ನಿರ್ದೇಶನಾಲಯದ ಇತ್ತೀಚಿನ ದಾಳಿ ಕುರಿತ ಪ್ರಶ್ನೆಗೆ ಸುರ್ಜೇವಾಲಾ ಉತ್ತರಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಎಂ ಡಿ ಕೆ ಶಿವಕುಮಾರ್ ಸೇರಿದಂತೆ ರಾಜ್ಯದ ಹಲವಾರು ಕಾಂಗ್ರೆಸ್ ನಾಯಕರು ಮತ್ತು ಸಚಿವರ ಮೇಲೆ ಕೇಂದ್ರ ಸಂಸ್ಥೆಗಳು ನಡೆಸಿದ ದಾಳಿಗಳನ್ನು ಪಟ್ಟಿ ಮಾಡಿದರು.

'ಹಾಗಾದರೆ, ಪಟ್ಟಿಯನ್ನು ನೋಡಿ. ಈ ನಾಯಕರಲ್ಲಿ ಹೆಚ್ಚಿನವರು ಎಸ್‌ಸಿ/ಎಸ್‌ಟಿ, ಒಬಿಸಿ ನಾಯಕರು ಅಥವಾ ರೈತರ ಪುತ್ರರು. ಬಿಜೆಪಿ ನಮ್ಮನ್ನು ಬೆದರಿಸಬಹುದು, ಮಂಡಿಯೂರುವಂತೆ ಮಾಡಬಹುದು ಎಂದು ಭಾವಿಸುತ್ತದೆ. ಅವರು ತಪ್ಪಾಗಿ ಭಾವಿಸಿದ್ದಾರೆ. ಕರ್ನಾಟಕದಲ್ಲಿ ಬಿಜೆಪಿಯೇ ಹತಾಶೆಗೊಂಡಿದೆ, ವಿಭಜನೆಯಾಗಿದೆ ಮತ್ತು ಆಂತರಿಕ ಹೋರಾಟದಲ್ಲಿ ತೊಡಗಿದೆ. ಅದು ನಮ್ಮ ಅಹಿಂದ ನಾಯಕರ ಮೇಲೆ ದಾಳಿ ಮಾಡುತ್ತಿದೆ. ನಾವು ಹಿಂಜರಿಯುವುದಿಲ್ಲ ಅಥವಾ ಹೆದರುವುದಿಲ್ಲ. ಇಡೀ ಪಕ್ಷವು ಸತೀಶ್ ಜಾರಕಿಹೊಳಿ ಮತ್ತು ನಮ್ಮ ಎಲ್ಲ ನಾಯಕರೊಂದಿಗೆ ಒಗ್ಗಟ್ಟಿನಿಂದ ನಿಂತಿದೆ' ಎಂದು ಅವರು ಹೇಳಿದರು.

# ನೀರು ಬಿಡುವವರೆಗೆ ಕದಲಲ್ಲ: ರೈತರ ಪಟ್ಟು

1ನೇ ಪುಟದಿಂದ..

ರೈತರು ಟ್ರ್ಯಾಕ್ಟರ್, ದ್ವಿಚಕ್ರ ವಾಹನ ಹಾಗೂ ಕಾರುಗಳಲ್ಲಿ ಆಗಮಿಸಿದ್ದರು. ಆದರೆ, ಶಿರಮಗೊಂಡನಹಳ್ಳಿ ಕ್ರಾಸ್‌ನಲ್ಲಿ ರಸ್ತೆಗಳಿಗೆ ಬ್ಯಾರಿಕೇಡ್ ಅಳವಡಿಸಿ ರೈತರ ವಾಹನಗಳನ್ನು ತಡೆದ ಹಿನ್ನೆಲೆಯಲ್ಲಿ ಸ್ಥಳದಲ್ಲಿ ಕೆಲಕಾಲ ಬಿಗುವಿನ ವಾತಾವರಣ ನಿರ್ಮಾಣವಾಯಿತು.

'ನೀರು ಬಿಡುವವರೆಗೆ ಜಾಗ ಬಿಟ್ಟು ಕದಲಲ್ಲ' : ರೈತರನ್ನು ತಡೆದ ಕ್ರಮಕ್ಕೆ ಅಸಮಾಧಾನ ವ್ಯಕ್ತಪಡಿಸಿದ ತೇಜಸ್ವಿ ವಿ.ಪಟೇಲ್, "ಭದ್ರಾ ಡ್ಯಾಂನಿಂದ ಬಲದಂಡೆ ನಾಲೆಗೆ ನೀರು ಬಿಡುಗಡೆ ಮಾಡುವ ನಿರ್ಧಾರವನ್ನು ಸರ್ಕಾರ ಪ್ರಕಟಿಸುವವರೆಗೆ ನಮ್ಮ ಹೋರಾಟ ನಿಲ್ಲುವುದಿಲ್ಲ. ನಾವು ಎರಡು ದಿನಕ್ಕಾಗುವಷ್ಟು ಆಹಾರ, ಅಗತ್ಯ ಸಾಮಗ್ರಿಗಳೊಂದಿಗೆ ಬಂದಿದ್ದೇವೆ. ಇದೇ ಸ್ಥಳದಲ್ಲಿ ಅಡುಗೆ ಮಾಡಿಕೊಂಡು ಊಟ ಮಾಡುತ್ತೇವೆ. ನೀರು ಬಿಡುಗಡೆಯಾಗುವವರೆಗೆ ಸ್ಥಳ ಬಿಟ್ಟು ಕದಲುವುದಿಲ್ಲ" ಎಂದು ಎಚ್ಚರಿಸಿದರು.

"ನಾವು ರೈತರು ಟ್ರ್ಯಾಕ್ಟರ್‌ಗಳಲ್ಲಿ ಜಿಲ್ಲಾಧಿಕಾರಿ ಕಚೇರಿಗೆ ಬರಬಾರದಾ? ಇನ್ನೋವಾ ಕಾರಿನಲ್ಲೇ ಬರಬೇಕಾ? ರೈತರ ಹೋರಾಟ ತಡೆಯಲು ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಜಿಲ್ಲಾಡಳಿತಕ್ಕೆ ಅಷ್ಟು ಅಧಿಕಾರವಿದ್ದರೆ ದಾವಣಗೆರೆಗೆ ಯಾವುದೇ ಟ್ರ್ಯಾಕ್ಟರ್ ಬರದಂತೆ ತಡೆಯಲಿ ನೋಡೋಣ" ಎಂದು ಆಕ್ರೋಶ ವ್ಯಕ್ತಪಡಿಸಿದರು.

"ಸೂಳೆಕೆರೆ ಗೇಟ್ ಎತ್ತಬೇಕು, ಭದ್ರಾ ಬಲದಂಡೆ ನಾಲೆಗೆ ನೀರು ಹರಿಸಬೇಕು ಹಾಗೂ 7 ಗಂಟೆ ನಿರಂತರ ವಿದ್ಯುತ್ ಪೂರೈಸಬೇಕು ಎಂಬುದು ನಮ್ಮ ಪ್ರಮುಖ ಬೇಡಿಕೆಗಳು. ಬಲದಂಡೆ ನಾಲೆಗೆ ಯಾವಾಗ ನೀರು ಹರಿಸುತ್ತೀರಿ ಎಂಬುದನ್ನು ಜಿಲ್ಲಾಧಿಕಾರಿಗಳು ಸ್ಪಷ್ಟಪಡಿಸಬೇಕು" ಎಂದು ಆಗ್ರಹಿಸಿದರು. 'ಸ್ವತಂತ್ರವಾಗಿ ನಿರ್ಧಾರ ಕೈಗೊಳ್ಳಲು ಸಾಧ್ಯವಿಲ್ಲ' ಸ್ಥಳಕ್ಕೆ ಆಗಮಿಸಿ ರೈತರ ಅಹವಾಲು ಆಲಿಸಿದ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ, "ರೈತರ ಬೇಡಿಕೆ ಹಾಗೂ ಜಿಲ್ಲೆಯ ಪರಿಸ್ಥಿತಿಯನ್ನು ಸರ್ಕಾರದ ಗಮನಕ್ಕೆ ಈಗಾಗಲೇ ತಂದಿದ್ದೇವೆ. ಭದ್ರಾ ಡ್ಯಾಂ ಬೇರೆ ಜಿಲ್ಲೆಯ ವ್ಯಾಪ್ತಿಯಲ್ಲಿದೆ. ಜಿಲ್ಲಾಧಿಕಾರಿಯಾಗಿ ನಾನು ಸ್ವತಂತ್ರವಾಗಿ ಯಾವುದೇ ನಿರ್ಧಾರ ಕೈಗೊಳ್ಳಲು ಸಾಧ್ಯವಿಲ್ಲ. ರೈತರ ಬೇಡಿಕೆಗಳನ್ನು ಸರ್ಕಾರ, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲೆಯ ಎಲ್ಲ ಶಾಸಕರ ಗಮನಕ್ಕೂ ತಂದಿದ್ದೇವೆ" ಎಂದು ತಿಳಿಸಿದರು.

"ದಾವಣಗೆರೆಗೆ ಕುಡಿಯುವ ನೀರಿಗಾಗಿ 2 ಟಿಎಂಸಿ ನೀರಿನ ಅಗತ್ಯವಿದೆ. ಈಗಾಗಲೇ 1.2 ಟಿಎಂಸಿ ನೀರು ಬಿಡಿಸಿಕೊಳ್ಳಲಾಗಿದೆ. ಆದರೆ ಆ ನೀರು ನಮಗೆ ಸಂಪೂರ್ಣವಾಗಿ ತಲುಪಿಲ್ಲ. ಕಾಲುವೆಗಳಲ್ಲಿ ಏನೇನು ಆಗುತ್ತಿದೆ ಎಂಬುದು ನಿಮಗೂ ಗೊತ್ತಿದೆ. ರೈತರ ಭಾವನೆ ಹಾಗೂ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ಮತ್ತೊಮ್ಮೆ ತರುತ್ತೇನೆ. ನಾನೂ ರೈತನ ಮಗನಾಗಿದ್ದು, ರೈತರ ಪರವಾಗಿದ್ದೇನೆ. ಆದರೆ ಸ್ವತಂತ್ರವಾಗಿ ನಿರ್ಧಾರ ಕೈಗೊಳ್ಳುವ ಅಧಿಕಾರ ನನಗಿಲ್ಲ" ಎಂದು ಹೇಳಿದರು.

ರೈತರು ಹೋರಾಟ ಮುಂದುವರಿಸುವುದಾಗಿ ತಿಳಿಸಿದ್ದಾರೆ ಎಂದು ಜಿಲ್ಲಾಧಿಕಾರಿ ಹೇಳಿದರು. ಸಾವಿರಾರು ರೈತರ ಉಪಸ್ಥಿತಿ : ಹೋರಾಟದಲ್ಲಿ ಹೊನ್ನಾಳಿ ಶಾಸಕ ಡಿ.ಜಿ.ಶಾಂತನಗೌಡ, ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ, ಮಾಜಿ ಶಾಸಕ ಎಂ.ಬಸವರಾಜ ನಾಯ್ಕ, ಬಿ.ಜಿ.ಅಜಯಕುಮಾರ, ಚಂದ್ರಶೇಖರ ಪೂಜಾರ, ಕರಿಬಸಪ್ಪ, ಬಿ.ಎಸ್.ಜಗದೀಶ, ರಾಜು ವೀರಣ್ಣ, ಪ್ರವೀಣ ಜಾಧವ್, ಪಂಜು ಪೈಲ್ವಾನ್ ಸೇರಿದಂತೆ ವಿವಿಧ ಭಾಗಗಳಿಂದ ಆಗಮಿಸಿದ್ದ ಸಾವಿರಾರು ರೈತರು ಭಾಗವಹಿಸಿದ್ದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಎಚ್.ಟಿ.ಶೇಖರ್ ಸೇರಿದಂತೆ ಪೊಲೀಸ್ ಅಧಿಕಾರಿಗಳು ಸ್ಥಳದಲ್ಲಿ ಭದ್ರತೆ ಕೈಗೊಂಡಿದ್ದರು.

# ನಕಲಿ ಔಷಧ ತಯಾರಕರ ವಿರುದ್ಧ ಕೊಲೆ ಕೇಸ್: ಸಚಿವ ಖಾದರ್ ಎಚ್ಚರಿಕೆ

1ನೇ ಪುಟದಿಂದ...

ಕೇಂದ್ರ ಸರ್ಕಾರವನ್ನು ರಾಜ್ಯ ಸರ್ಕಾರ ಒತ್ತಾಯಿಸಲಿದೆ ಎಂದು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಖಾದರ್, ಪ್ರಾಥಮಿಕ ತನಿಖೆಯಲ್ಲಿ ನಕಲಿ ಔಷಧಗಳನ್ನು ವಿವಿಧ ರಾಜ್ಯಗಳಲ್ಲಿ ತಯಾರಿಸಿ ಕರ್ನಾಟಕಕ್ಕೆ ತಂದು, ಇಲ್ಲಿಂದ ದೇಶದ ವಿವಿಧ ಭಾಗಗಳಿಗೆ ಪೂರೈಸಲಾಗುತ್ತಿತ್ತು ಎಂಬುದು ಬೆಳಕಿಗೆ ಬಂದಿದೆ ಎಂದು ತಿಳಿಸಿದರು. ಮುಖ್ಯಮಂತ್ರಿ ಹಾಗೂ ಗೃಹ ಸಚಿವರೊಂದಿಗೆ ಚರ್ಚಿಸಿದ ಬಳಿಕ, ಪೊಲೀಸ್ ಅಧಿಕಾರಿಗಳು ಹಾಗೂ ಔಷಧ ನಿಯಂತ್ರಣ ಮತ್ತು ವಾಣಿಜ್ಯ ತೆರಿಗೆ ಇಲಾಖೆಗಳ ಅಧಿಕಾರಿಗಳನ್ನು ಒಳಗೊಂಡ ವಿಶೇಷ ತನಿಖಾ ತಂಡ ರಚಿಸಲು ಸರ್ಕಾರ ನಿರ್ಧರಿಸಿದೆ. ಈ ಕಾರ್ಯಾಚರಣೆಯಲ್ಲಿ ಬಳಸಲಾಗಿರುವ ಇನ್‌ವಾಯ್ಸ್‌ಗಳು ಮತ್ತು ವೋಚರ್‌ಗಳ ಮೂಲದ ಬಗ್ಗೆಯೂ ತಂಡ ತನಿಖೆ ನಡೆಸಲಿದೆ.

ವಶಪಡಿಸಿಕೊಂಡ ನಕಲಿ ಔಷಧಗಳ ಬ್ಯಾಚ್‌ಗಳನ್ನು ಆಸ್ಪತ್ರೆಗಳು ಮತ್ತು ಔಷಧ ಅಂಗಡಿಗಳಿಂದ ಹಿಂಪಡೆಯುವಂತೆ ಸರ್ಕಾರ ಈಗಾಗಲೇ ಆದೇಶಿಸಿದೆ. ಬಿಡದಿಯಲ್ಲಿ ಕೋಟಿಗೂ ಅಧಿಕ ಮೌಲ್ಯದ ನಕಲಿ ಔಷಧಗಳನ್ನು ವಶಪಡಿಸಿಕೊಂಡ ಪ್ರಕರಣವನ್ನು ಎಸ್‌ಐಟಿ ತನಿಖೆ ನಡೆಸಲಿದೆ. ಈ ಜಾಲಕ್ಕೆ ಅಂತಾರಾಜ್ಯ ಸಂಪರ್ಕಗಳಿರುವುದು ಕಂಡುಬರುತ್ತಿದ್ದು, ತಪ್ಪಿತಸ್ಥರನ್ನು ಯಾವುದೇ ಕಾರಣಕ್ಕೂ ಬಿಡುವುದಿಲ್ಲ ಎಂದು ಖಾದರ್ ಹೇಳಿದರು.

ಕಾರ್ಖಾನೆಗಳು, ಆಸ್ಪತ್ರೆಗಳು ಹಾಗೂ ಔಷಧ ಅಂಗಡಿಗಳಿಂದ ಸಂಗ್ರಹಿಸುವ ಔಷಧಗಳ ಗುಣಮಟ್ಟವನ್ನು ಯಾದೃಚ್ಛಿಕವಾಗಿ ಪರೀಕ್ಷಿಸಲು ಅತ್ಯಾಧುನಿಕ ಪ್ರಯೋಗಾಲಯ ಸ್ಥಾಪಿಸುವ ಅಥವಾ ಈಗಿರುವ ಪ್ರಯೋಗಾಲಯದೊಂದಿಗೆ ಸಹಭಾಗಿತ್ವ ಹೊಂದುವ ಸಾಧ್ಯತೆಯನ್ನು ಸರ್ಕಾರ ಪರಿಶೀಲಿಸುತ್ತಿದೆ ಎಂದು ಖಾದರ್ ತಿಳಿಸಿದರು.

ತನಿಖೆಗೆ ನೆರವಾಗಲು ಕೇಂದ್ರ ಔಷಧ ಕಣ್ಗಾವಲು ಅಧಿಕಾರಿಯೊಬ್ಬರನ್ನು ನಿಯೋಜಿಸುವಂತೆ ಕೋರಿ ಕೇಂದ್ರ ಆರೋಗ್ಯ ಸಚಿವರಿಗೆ ಪತ್ರ ಬರೆದಿರುವುದಾಗಿ ಅವರು ಹೇಳಿದರು. ವಶಪಡಿಸಿಕೊಂಡ ಔಷಧಗಳ ಮೌಲ್ಯ 5 ಕೋಟಿಗೂ ಅಧಿಕವಾಗಿರುವುದರಿಂದ ಕೇಂದ್ರ ಸರ್ಕಾರ ಸಿಬಿಐ ತನಿಖೆಗೂ ಆದೇಶಿಸುವ ಸಾಧ್ಯತೆಯಿದೆ ಎಂದು ಅವರು ತಿಳಿಸಿದರು.

# ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಸತ್ಪ್ರಜೆಗಳನ್ನಾಗಿ ಬೆಳೆಸಿ: ರಾಜಣ್ಣ



ಮಧುಗಿರಿ: ಕಷ್ಟಗಳು ನಾವೇ ಬಗೆಹರಿಸಿಕೊಳ್ಳಬೇಕು. ಮುಂದಿನ ತಲೆ ಮಾರಿಗೆ ಕಷ್ಟ ಕೊಡದೆ ಪೋಷಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಸ್ನೇಹ ಸೌಹಾರ್ದದಿಂದ ಸಮಾಜದಲ್ಲಿ ಇತರರೊಂದಿಗೆ ಕೂಡಿ ಬದುಕು ಕಟ್ಟಿಕೊಳ್ಳುವ ನಡೆ,ನುಡಿ ನೋಟವನ್ನು ಬೆಳಸಿಕೊಂಡು ತಮ್ಮ ಮಕ್ಕಳನ್ನು ಸತ್ಪ್ರಜೆಗಳನ್ನಾಗಿ ಬೆಳಸಬೇಕೆಂದು ಶಾಸಕ ಕೆ.ಎನ್.ರಾಜಣ್ಣ ಕಿವಿ ಮಾತು ಹೇಳಿದರು.

ಬುಧವಾರ ಪಟ್ಟಣದ ಬೆಂಕಿ ಪುದಲ್ಲಿ ಶುದ್ಧ ಕುಡಿವ ನೀರಿನ ಘಟಕ ಮತ್ತು ನೂತನ ಸಿಸಿ ರಸ್ತೆಯನ್ನು ಜನಾರ್ಪಣೆಗೊಳಿಸಿ ಮಾತನಾಡಿದ ಅವರು, ಜನತೆಗೆ ಬೇಕಾದ ಎಲ್ಲ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಮಧುಗಿರಿಯ ಸಮಗ್ರ ಅಭಿವೃದ್ಧಿಗೆ ಪ್ರಮಾಣಿಕವಾಗಿ ಶ್ರಮಿಸುತ್ತೇನೆ ಎಂದರು.

ಎಲ್ಲರೂ ನಿರಳವಾಗಿ ಜೀವನ ನಡೆಸಲು ಸೂಕ್ತ ಪರಿಸರವನ್ನು ನಿರ್ಮಿಸುವ ಜೊತೆಗೆ ಮೌಲ್ಯಯುತದಾರಿತವಾಗಿ ಬದುಕಿ ಈ ಭಾಗದಲ್ಲಿ ಕೂಲಿ ನಾಲಿ ಮಾಡಿ ಬದುಕುವ ಶ್ರಮಜೀವಿಗಳು ವಾಸಿಸುತ್ತಿದ್ದು ,ತಮ್ಮ ಅಭ್ಯದಯಕ್ಕೆ ಬೇಕಾದ ಸರ್ಕಾರದ ಎಲ್ಲ ಯೋಜನೆಗಳನ್ನು ಬಡವರು,ರೈತರು ಹಾಗೂ ಕೂಲಿಕಾರ್ಮಿಕರಿಗೆ ನೆರವು ನೀಡುವುದಾಗಿ ಭರವಸೆ ನೀಡಿದರು.

ಎಲ್ಲ ವರ್ಗದಲ್ಲೂ ಆರ್ಥಿಕವಾಗಿ ಬಡವರಿದ್ದು, ಅಂತವರನ್ನು ಮುಖ್ಯ ವಾಹಿನಿಗೆ ತರಲು ಸದಾ ಪ್ರಯತ್ನಿಸುತ್ತೇನೆ. ಅದಕ್ಕಾಗಿ ಇದು ಯಶಸ್ವಿಯಾಗಲು ನನ್ನೊಂದಿ ಎಲ್ಲರೂ ಸಹಕರಿಸಿ ಎಂದವರು,ಎಲ್ಲ ಇಲಾಖೆಯಿಂದ ದೊರೆಯುವ ಸವಲತ್ತುಗಳನ್ನು ತಮಗೆ ದೊರಕಿಸಿ ಕೊಡುವುದಾಗಿ ರಾಜಣ್ಣ ತಿಳಿಸಿದರು.

**ಕುಡಿವ ನೀರಿಗೆ ಮೊದಲ ಆದ್ಯತೆ:**

ಪ್ರವಾಸಿ ಮಂದಿರದಲ್ಲಿ ಸಾರ್ವಜನಿಕರ ಕುಂದು ಕೊರತೆ ಹಾಗೂ ಅರ್ಜಿ ಸ್ವೀಕರಿಸಿದ ಶಾಸಕ ಕೆ.ಎನ್. ರಾಜಣ್ಣ ಕೆಲವು ಅಹವಾಲುಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸುವ ಮೂಲಕ ಜನರ ಸಮಸ್ಯೆಗೆ ನೇರವಾಗಿ ಸ್ಪಂದಿಸಿದರು.

ನಂತರ ತಾಲೂಕು ಮಟ್ಟದ ಅಧಿಕಾರಿಗಳ ಸಭೆ ನಡೆಸಿ ತಾಲೂಕಿನಲ್ಲಿ ಬರಗಾಲ ಎದುರಾಗಿದ್ದು, ಜನ ಜಾನುವಾರುಗಳಿಗೆ ಕುಡಿವ ನೀರಿಗೆ ಸಮಸ್ಯೆ ಆಗದಂತೆ ಮುನ್ನಚ್ಚರಿಕೆ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಆಡಳಿತಾಧಿಕಾರಿಗಳು ಮತ್ತು ಪಿಡಿಓಗಳು ಪ್ರತಿ ನಿತ್ಯ ಗ್ರಾಪಂಗೆ ಬೇಟಿ ನೀಡಿ ನೀರಿನ ಸಮಸ್ಯೆ ಇರುವ ಪ್ರದೇಶಗಳನ್ನು ಗುರುತಿಸಿ ತುರ್ತಾಗಿ ಬೋರ್ ವೆಲ್ಲ ಕೊರೆಸಿ ಸಾರ್ವಜನಿಕರಿಗೆ ಸಮರ್ಪಕ ಕುಡಿವ ನೀರು ಮತ್ತು ಮೂಲ ಭೂತ ಸೌಲಭ್ಯಗಳನ್ನು ಒದಗಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಾಗಿ ಸೂಚಿಸಿದರು. ರೈತರ ಜಮೀನುಗಳಿಗೆ ಹಾಗೂ ಕುಡಿವ ನೀರಿನ ಪೂರೈಕೆ ಮಾರ್ಗಗಳಿಗೆ ಸಂಬಂಧಿಸಿದ ವಿದ್ಯಾತ್ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸುವಂತೆ ಸೂಚಿಸಿದರು.

ಆಯಾಯ ಪಕ್ಷಗಳು ಜಾತಿಗೆ ಬದ್ಧವಾಗಿದ್ದು,ಜೆಡಿಎಸ್ ಪಕ್ಷ ಅಧಿಕಾರಕ್ಕೆ ಬಂದರೆ ವಕ್ಕಲಿಗರನ್ನು ಸಿಎಂ ಆಗುತ್ತಾರೆ. ಬಿಜೆಪಿ ಬಂದರೆ ಲಿಂಗಾಯತರನ್ನು ಸಿಎಂ ಮಾಡುತ್ತಾರೆ.ಆದರೆ ಕಾಂಗ್ರೆ ಪಕ್ಷ ಸರ್ವಜನಾಂಗದ ಏಳಿಗೆಗ ಬದ್ಧವಾಗಿದೆ.ಆದ್ದರಿಂದ ಅದನ್ನು ಹೊರತು ಪಡಿಸಿ ನನ್ನ ರಾಜಕೀಯ ಜೀವನ ಅನ್ಯ ಪಕ್ಷಗಳತ್ತ ಹೊಗುವುದಿಲ್ಲ, ನನಗೆ ಕಾಂಗ್ರೆಸ್ ಪಕ್ಷ ಟಿಕೆಟ್ ನೀಡಿದ್ದು ನನಗೆ ಎಲ್ಲವನ್ನೂ ನೀಡಿದೆ. ಹಿಂದುಳಿದ ವರ್ಗದವರಿಗೂ ಕಾಂಗ್ರೆಸ್ ಅಧಿಕಾರ ನೀಡಿದ್ದು ,ಇತರೆ ಪಕ್ಷಗಳಂತೆ ಜಾತಿ ಬೇಧ ಮಾಡಿಲ್ಲ, ನಾನು ಕಾಂಗ್ರೆಸ್ನಲ್ಲೇ ಉಳಿಯುತ್ತೇನೆ. ತ್ಯಜಿಸುವ ಪ್ರಶ್ನೆಯೇ ಇಲ್ಲ ,ಲೋಕಸಭಾ ಕ್ಷೇತ್ರಗಳು ಡಿ ಲಿಮಿಟೇಷನ್ ಆದರೆ ನಾನು ಮಧುಗಿರಿ ,ಪಾವಗಡ,ಕೊರಟಗೆರೆ,ಶಿರಾ ಮತ್ತು ಚಿಕ್ಕನಾಯಕನಹಳ್ಳಿ ಸೇರಿಸಿ ಒಂದು ಸಂಸತ್ ಕ್ಷೇತ್ರವಾದರೆ ನಾನು ಲೋಕಸಭೆ ಸ್ಪರ್ಧಿಸುವುದಾಗಿ ತಿಳಿಸಿ, ಸಿದ್ದರಾಮಯ್ಯ ಇದ್ದರೆ ಕಾಂಗ್ರೆಸ್ ಸದೃಡ, ಎಲ್ಲ ಜನಾಂಗಕ್ಕೂ ಅಧಿಕಾರ ಸಿಗುತ್ತದೆ ಎಂದರೆ ಅದು ಕಾಂಗ್ರೆಸ್ ಪಕ್ಷದಲ್ಲಿ ಮಾತ್ರ , ಎಸ್. ಎಂ. ಕೃಷ್ಣ , ಧರ್ಮಸಿಂಗ್,ವೀರಪ್ಪಮೊಯಿಲಿ,ಬಂಗಾರಪ್ಪ,ವಿರೇಂದ್ರಪಾಟಿಲ್ ಸಹ ಸಿಎಂ ಆಗಿದ್ದು ಕಾಂಗ್ರೆಸ್ ಪಕ್ಷದಲ್ಲೇ ಎಂದು ಶಾಸಕ ಕೆ.ಎನ್.ರಾಜಣ್ಣ ಸೂಕ್ಷ್ಮವಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಕೆಪಿಸಿಸಿ ಮೆಂಬರ್ ಎಂ.ಎಸ್. ಮಲ್ಲಿಕಾರ್ಜುನಯ್ಯ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆದಿನಾರಾಯಣರೆಡ್ಡಿ, ಪುರಸಭೆ ಮಾಜಿ ಅಧ್ಯಕ್ಷರಾದ ಎನ್.ಗಂಗಣ್ಣ,ಕೆ.ಪ್ರಕಾಶ್, ಡಿ.ಜಿ.ಶಂಕರ ನಾರಾಯಣ ಶ್ರೆಷ್ಠಿ, ಎಂ.ಕೆ.ನಂಜುಂಡರಾಜು, ಅಯ್ಯೂಬ್, ಲಾಲಪೇಟೆ ಮಂಜುನಾಥ್, ಜುಬೇದಬಾನು ,ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋಪಾಲಯ್ಯ, ಲಕ್ಷ್ಮೀನಾರಾಯಣ್, ಕಿಶೋರ್,ನರಸಿಂಹಮೂರ್ತಿ,ಆಚಾರ್ ಮಂಜುನಾಥ್, ಆಲೀಂ,ಶಿವಪ್ಪ,ಮಾರುತಿ,ಎಸ್ ಬಿಟಿ ರಾಮು, ಶ್ರೀಧರ್, ಸಾರ್ವಜನಿಕರಿದ್ದರು.

# ಒನಕೆ ಓಬವ್ವನ ಸ್ತಬ್ಧಚಿತ್ರ ಅನಾವರಣ



ಕೂಡ್ಲಿಗಿ: ಪಟ್ಟಣದ ಹಿಂದೂ ಮಹಾಗಣಪತಿ ಸಮಿತಿಯಿಂದ ಆಯೋಜಿಸಿರುವ 14ನೇ ವರ್ಷದ ಗಣೇಶೋತ್ಸವದ ಅಂಗವಾಗಿ ಕೂಡ್ಲಿಗಿ ತಾಲೂಕಿನ ಗುಡೇಕೋಟೆಯ ವೀರನಾರಿ ಒನಕೆ ಓಬವ್ವ ಅವರ ಇತಿಹಾಸವನ್ನು ಸಾರುವ ಸ್ತಬ್ಧಚಿತ್ರವನ್ನು ಅನಾವರಣಗೊಳಿಸಲಾಯಿತು.

ಪಟ್ಟಣದ ಹಳೇ ಸಂತೆ ಮಾರ್ಕೆಟ್‌ನಲ್ಲಿರುವ ಹಿಂದೂ ಮಹಾಗಣಪತಿ ವೇದಿಕೆಯ ಮುಂಭಾಗದಲ್ಲಿ ನಿರ್ಮಿಸಲಾಗಿದ್ದ ಸ್ತಬ್ಧಚಿತ್ರವನ್ನು ಕೂಡ್ಲಿಗಿ ಡಿವೈಎಸ್ಪಿ ಮಲ್ಲೇಶ್ ದೊಡ್ಡಮನಿ ಹಾಗೂ ಸಿಪಿಐ ಪ್ರಹ್ಲಾದ ಆರ್. ಚನ್ನಗಿರಿ ಅವರು ಅನಾವರಣಗೊಳಿಸಿದರು. ಈ ಮೂಲಕ ತಾಲೂಕಿನ ಐತಿಹಾಸಿಕ ಹೆಮ್ಮೆ ಹಾಗೂ ವೀರನಾರಿ ಒನಕೆ ಓಬವ್ವ ಅವರ ಸಾಹಸವನ್ನು ಜನರಿಗೆ ಪರಿಚಯಿಸುವ ಪ್ರಯತ್ನ ಮಾಡಲಾಗಿದೆ.

ಕಾರ್ಯಕ್ರಮದಲ್ಲಿ ವಕೀಲ ಗುರಿಕಾರ ರಾಘವೇಂದ್ರ, ಎಸ್. ವೆಂಕಟೇಶ, ಭೀಮಾ ಜಲ್ಸಾ, ಗುರು, ಉಗ್ರಂ ಕಿಟ್ಟಿ, ಉಗ್ರಂ ಉಮೇಶ್, ನಾಗರಾಜ್, ಶೇಷಾದ್ರಿ, ವಿಷ್ಣು, ಆಕಾಶ ಸೇರಿದಂತೆ ಹಿಂದೂ ಮಹಾಗಣಪತಿ ಸಮಿತಿಯ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆ ವಿಶ್ವಕ್ಕೆ ಮಾದರಿ–ಶಾಸಕ ಎ. ಆರ್. ಕೃಷ್ಣಮೂರ್ತಿ



ಯಳಂದೂರು : ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಇಡೀ ವಿಶ್ವಕ್ಕೆ ಭಾರತ ಮಾದರಿಯಾಗಿದೆ. ಇದಕ್ಕೆ ಸಾಕ್ಷಿಯಾಗಿ ನಮ್ಮ ಸಂವಿಧಾನ ನಿಂತಿದೆ ಎಂದು ಶಾಸಕ ಎ.ಆರ್. ಕೃಷ್ಣಮೂರ್ತಿ ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಪಟ್ಟಣದ ತಾಲೂಕು ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ತಾಲೂಕು ಅಡಳಿತ, ತಾಲೂಕು ಪಂಚಾಯಿತಿ ಸಮಾಜ ಕಲ್ಯಾಣ ಇಲಾಖೆ, ಕಾನೂನು ಸೇವೆಗಳ ಪ್ರಾಧಿಕಾರ, ಶಿಕ್ಷನ ಹಾಗೂ ಸಾಕ್ಷರತಾ ಇಲಾಖೆಯ ವತಿಯಿಂದ ಹಮ್ಮಿಕೊಂಡಿದ್ದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ವಿಶ್ವದ ಅನೇಕ ದೇಶಗಳು ಅಳವಡಿಸಿಕೊಂಡಿವೆ. ಆದರೂ ಪ್ರಬಲವಾದ ಪ್ರಜಾಪ್ರಭುತ್ವ ಭಾರತದ್ದು ಎಂಬುದನ್ನು ಹೇಳಿಕೊಳ್ಳಲು ನಮಗೆ ಹೆಮ್ಮೆಯಾಗಿದೆ. ಡಾ.ಬಿ.ಆರ್. ಅಂಬೇಡ್ಕರ್ ವಿರಚಿತ ಸಂವಿಧಾನದಲ್ಲಿ ರಾಜಪ್ರಭುತ್ವದ ಅನೇಕ ನ್ಯೂನತೆಗಳನ್ನು ತೊಡೆದು ಇಲ್ಲಿ ಪ್ರಜೆಗಳೇ ಪ್ರಭುಗಳು ಎಂಬುದನ್ನು ತೋರಿಸಿಕೊಟ್ಟಿದ್ದಾರೆ. ನಮ್ಮ ದೇಶ ಇಷ್ಟೊಂದು ಪ್ರಗತಿಯನ್ನು ಸಾಧಿಸಿರುವುದು ಪ್ರಜಾಪ್ರಭುತ್ವದ ತಳಹದಿಯಲ್ಲೇ ಆಗಿದೆ. ಇಲ್ಲಿ ಒಂದೊಂದು ಮತಕ್ಕೂ ಇರುವ ಶಕ್ತಿ ಅಗಾಧವಾಗಿದೆ. ಇದಕ್ಕೆ ನಾನು ಕೇವಲ ಒಂದು ಮತದಿಂದ ಸೋತಿದ್ದು ಒಂದು ಉತ್ತಮ ಉದಾಹರಣೆಯಾಗಿದೆ. ಇಲ್ಲಿ ಒಂದೊಂದು ಮತವೂ ಅಮೂಲ್ಯವಾಗಿದೆ. ಇದರ ಅರ್ಥ ಪ್ರಜಾಪ್ರಭುತ್ವದಲ್ಲಿ ಒಬ್ಬ ಪ್ರಜೆಯೂ ಕೂಡ ಎಷ್ಟು ಪ್ರಾಮುಖ್ಯತೆ ವಹಿಸುತ್ತಾನೆ ಎಂಬುವುದೇ ಆಗಿದೆ. ಪ್ರಜಾಪ್ರಭುತ್ವದಲ್ಲಿ ಪ್ರತಿ ವ್ಯಕ್ತಿಯೂ ಸಾರ್ವಭೌಮನಾಗಿದ್ದಾನೆ. ಇದರಲ್ಲಿ ಬರುವ ಅಧಿಕಾರ ಶ್ರೇಣಿಕೃತ ಪದ್ಧತಿಯೂ ಒಂದಕ್ಕೊಂದು ಕೊಂಡಿಯಂತೆ ಕೂಡಿಕೊಂಡಿರುತ್ತದೆ. ಜಗತ್ತಿನ ಬಹುತೇಕ ರಾಷ್ಟ್ರಗಳು ಇದನ್ನು ಅಳವಡಿಸಿಕೊಂಡು ಉತ್ತಮ ಆಡಳಿತ ನಿರ್ವಹಿಸುತ್ತಿದೆ ಎಂದು ಮಾಹಿತಿ ನೀಡಿದರು.

ಮುಖ್ಯ ಭಾಷಣಕಾರರಾದ ವಕೀಲ ಗೌಡಹಳ್ಳಿ ಮಹೇಶ್ ಹಾಗೂ ಉಪನ್ಯಾಸಕಿ ಶ್ವೇತಾ ಪ್ರಜಾಪ್ರಭುತ್ವದ ಮಹತ್ವ, ಇದು ಬೆಳೆದುಕೊಂಡು ಬಂದ ಬಗೆ, ಪ್ರಸ್ತುತ ಇದರ ಅಗತ್ಯತೆ, ಇದರಲ್ಲಿ ಅಡಕವಾಗಿರುವ ಒಳ್ಳೆಯ ಅಂಶಗಳು, ಇದನ್ನು ಬಳಸಿಕೊಂಡು ಬಂದಿರುವ ದೇಶದ ಸ್ಥಿತಿಗತಿಗಳು, ನಮ್ಮ ದೇಶ ಸಾಧಿಸಿರುವ ಪ್ರಗತಿ ಕುರಿತು ವಿಸ್ತೃತ ಮಾಹಿತಿ ನೀಡಿದರು.

ತಹಶೀಲ್ದಾರ್ ಎಸ್.ಎಲ್. ನಯನ, ತಾಪಂ ಇಒ ಎ.ಬಿ. ವೇಣು, ಪಪಂ ಮುಖ್ಯಾಧಿಕಾರಿ ಎಂ.ಪಿ. ಮಹೇಶ್‌ಕುಮಾರ್, ಬಿಇಒ ಮಾರಯ್ಯ, ಬಿಳಿಗಿರಿರಂಗನಾಥಸ್ವಾಮಿ ದೇಗುಲ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಗುಂಬಳ್ಳಿ ರಾಜಣ್ಣ, ಎಇಇ ಚಂದ್ರಶೇಖರ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಕೇಶವಮೂರ್ತಿ, ಪಪಂ ಮಾಜಿ ಸದಸ್ಯರಾದ ಮಹೇಶ್, ಲಿಂಗರಾಜಮೂರ್ತಿ, ರವಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಶಾಲಾ, ಕಾಲೇಜು ವಿದ್ಯಾರ್ಥಿಗಳು ಇದ್ದರು.

# ಪಪ್ಪಾಯ ಹಣ್ಣಿನಲ್ಲಿ ಮೂಡಿದ ಗಣೇಶಾಕೃತಿ ರೈತ ಕುಟುಂಬದಲ್ಲಿ ಮೂಡಿದ ಸಂತಸ



ಬಳ್ಳಾರಿ: ಗಣಪತಿ ಹಬ್ಬದ ಸಂದರ್ಭದಲ್ಲಿ ಪಪ್ಪಾಯಿ ಹಣ್ಣಿನಲ್ಲಿ ಗಣೇಶನ ರೂಪ ಕಂಡು ರೈತ ಕುಟುಂಬ ಅಚ್ಚರಿಗೊಂಡಿರುವ ಘಟನೆ ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲೂಕಿನ ಕಾನಾಮಡಗು ಗ್ರಾಮದಲ್ಲಿ ಬೆಳಕಿಗೆ ಬಂದಿದೆ.

ರೈತ ಬಸವರಾಜ್ ಎನ್ನುವವರ ತೋಟದಲ್ಲಿನ ಪಪ್ಪಾಯದಲ್ಲಿ ಗಣೇಶಾಕೃತಿ ಕಂಡುಬಂದಿದೆ. ಸಹೋದರನಿಗೆ ಹಣ್ಣು ನೀಡಲು ರೈತ ಬಸವರಾಜ್ ಪಪ್ಪಾಯ ಕಿತ್ತು ತಂದಿದ್ದ. ಈ ವೇಳೆ ತಂದಿದ್ದ ಪಪ್ಪಾಯದಲ್ಲಿ ಗಣೇಶಾಕೃತಿ ಕಂಡುಬಂದಿದ್ದು, ಕುಟುಂಬಸ್ಥರು ಸಂತಸ ಪಟ್ಟಿದ್ದಾರೆ.

ಆನಂತರ ಪಪ್ಪಾಯಿಯನ್ನೇ ಗಣೇಶನ ರೂಪವೆಂದು ಭಾವಿಸಿದ ರೈತ ಕುಟುಂಬ ವಿಧಿವಿಧಾನಗಳೊಂದಿಗೆ ಪೂಜೆ ಸಲ್ಲಿಸಿದೆ. ಹಲವು ವರ್ಷಗಳ ಬಳಿಕ ರೈತ ಬಸವರಾಜ್ ಪಾಲ್ತೂರ್ ಕುಟುಂಬದಲ್ಲಿ ಮತ್ತೆ ಗಣೇಶೋತ್ಸವದ ಸಂಭ್ರಮ ಮನೆ ಮಾಡಿದೆ.

# ವಿವಿ ಸಾಗರ ಉಳಿವಿಗೆ ಜಾಥಾ



ಹಿರಿಯೂರು: 'ತಾಲ್ಲೂಕಿನ ವಿವಿ ಸಾಗರ ಅಣೆಕಟ್ಟೆ ಡೆಡ್ ಸ್ಟೋರೇಜ್ ಹಂತ ತಲುಪುವ ಮುನ್ನ ಎಚ್ಚರಗೊಳ್ಳದಿದ್ದರೆ ಕುಡಿಯುವ ನೀರಿಗೂ ತತ್ವಾರ ಎದುರಿಸಬೇಕಾಗುತ್ತದೆ' ಎಂದು ವಿವಿ ಸಾಗರ ಉಳಿಸಿ ಜಂಟಿ ಕ್ರಿಯಾ ಸಮಿತಿ ಅಧ್ಯಕ್ಷ ಕಸವನಹಳ್ಳಿ ರಮೇಶ್ ಎಚ್ಚರಿಸಿದರು.

ವಿವಿ ಪುರ ಗ್ರಾಮದಲ್ಲಿ ವಿವಿ ಸಾಗರ ಉಳಿವಿಗೆ ಹಮ್ಮಿಕೊಂಡಿದ್ದ ಜಾಥಾದ ವೇಳೆ ಗ್ರಾಮ ಸಭೆಯಲ್ಲಿ ಮಾತನಾಡಿದರು.

'ವಿವಿ ಸಾಗರ ಜಲಾಶಯದಿಂದ ನೀರನ್ನು ಒಯ್ಯಲು ದಶ ದಿಕ್ಕುಗಳಲ್ಲೂ ಹಾದಿ ತೋಡಲಾಗುತ್ತಿದೆ. ಹಿರಿಯೂರು ತಾಲ್ಲೂಕಿನ ರೈತರ ಅಚ್ಚುಕಟ್ಟು ಪ್ರದೇಶಕ್ಕೆಂದು ಮೈಸೂರಿನ ಒಡೆಯರು ನಿರ್ಮಿಸಿದ್ದ ಅಣೆಕಟ್ಟೆಯನ್ನು ಬೇಕಾಬಿಟ್ಟಿ ಬಳಸಲು ಬಿಟ್ಟರೆ, ಇದು ಬರೀ ಕುಡಿಯುವ ನೀರಿನ ಜಲಾಶಯವಾಗುವ ಅಪಾಯವಿದೆ. ಇದನ್ನೇ ನಂಬಿರುವ ತಾಲ್ಲೂಕಿನ 25 ಸಾವಿರ ಎಕರೆ ಅಚ್ಚುಕಟ್ಟು ಪ್ರದೇಶದ ರೈತರು ಹಲವು ದಶಕಗಳಿಂದ ಕಾಪಾಡಿಕೊಂಡು ಬಂದಿರುವ ತೋಟಗಳನ್ನು ಕಳೆದು ಕೊಳ್ಳಬೇಕಾಗುತ್ತದೆ. ಈಗಲೇ ಎಚ್ಚರಗೊಂಡು ವಿವಿ ಅಣೆಕಟ್ಟೆಯನ್ನು ಉಳಿಸಿಕೊಳ್ಳೋಣ' ಎಂದು ಮನವಿ ಮಾಡಿದರು.

'ವಿವಿ ಸಾಗರ ಹಿರಿಯೂರು ತಾಲ್ಲೂಕಿನ ರೈತರಿಗೆ ಸೇರಿದ್ದು ಎಂದು ಮೈಸೂರು ಒಡೆಯರು ಸ್ಪಷ್ಟವಾಗಿ ಹೇಳಿದ್ದರೂ ನಮ್ಮಲ್ಲಿ ಸರಿಯಾದ ನಾಯಕತ್ವವಿಲ್ಲದ ಕಾರಣಕ್ಕೆ, ಬೇರೆ ಬೇರೆ ತಾಲ್ಲೂಕಿನವರು, ಬೇರೆ ಜಿಲ್ಲೆಯವರು ಜಲಾಶಯದ ಮೇಲೆ ಕಣ್ಣು ಹಾಕಿದ್ದಾರೆ' ಎಂದು ಸಮಿತಿಯ ನಿರ್ದೇಶಕ ಪಿಟ್ಲಾಲಿ ಶ್ರೀನಿವಾಸ್ ಆರೋಪಿಸಿದರು.

ಜಂಟಿ ಕ್ರಿಯಾ ಸಮಿತಿ ಆರಂಭಿಸಿರುವ ವಿವಿ ಸಾಗರ ಉಳಿಸಿ ಕಾರ್ಯಕ್ರಮವನ್ನು ದೊಡ್ಡ ಆಂದೋಲನವನ್ನಾಗಿ ರೂಪಿಸದೇ ಹೋದಲ್ಲಿ ಭವಿಷ್ಯದಲ್ಲಿ ರೈತರ ಬದುಕು ಬೀದಿಗೆ ಬೀಳುವ ಅಪಾಯವಿದೆ ಎಂದು ರೈತ ಸಂಘದ ಮುಖಂಡ ದಸ್ತಗಿರಿ ಸಾಬ್ ಎಚ್ಚರಿಸಿದರು.

ಕಂಬದಹಳ್ಳಿ, ಕುರುಬರಹಳ್ಳಿ, ಅಮ್ಮನಹಟ್ಟಿ, ಕಾತ್ರಿಕೇನಳ್ಳಿ, ದೊಡ್ಡಘಟ್ಟ, ಕೂನಿಕೆರೆ, ಲಕ್ಕವ್ವನಹಳ್ಳಿ ಗ್ರಾಮಗಳಿಗೆ ಭೇಟಿ ನೀಡಿ ಗ್ರಾಮ ಸಭೆಗಳನ್ನು ನಡೆಸಲಾಯಿತು.

ಪೆರಿಸ್ವಾಮಿ, ಸುಬ್ರಹ್ಮಣ್ಯಂ, ಗೋವಿಂದರಾಜು, ಆದಿವಾಲ ತ್ರಿಯಂಭಕಮೂರ್ತಿ, ಮುತ್ತುಕುಮಾರ್, ರಾಮಚಂದ್ರ ಕಸವನಹಳ್ಳಿ, ಎಂಟಿಬಿ ನಾಯ್ಕ, ಶಶಿಕಲಾ, ಗಡಾರಿ ಕೃಷ್ಣಪ್ಪ, ಸರವಣ, ರವಿಶಂಕರ್, ಕೆ.ಜಿ. ಹನುಮಂತರಾಯ, ಚಂದ್ರು ಕುಮಾರ್, ದೊಡ್ಡಘಟ್ಟ ಕುಮಾರ್, ಗುರುಮೂರ್ತಿ, ನಿಜಲಿಂಗಪ್ಪ, ಕುಬೇರಪ್ಪ, ಪವನ್, ಸುಂದರ್ ಪಾಲ್ಗೊಂಡಿದ್ದರು.

# ಸೆ.18ರಿಂದ ನಗರದಲ್ಲಿ ಪಿರಮಿಡ್ ಧ್ಯಾನ ಶಿಬಿರ




ಬಳ್ಳಾರಿ: ಜನರ ದೈಹಿಕ, ಮಾನಸಿಕ ಹಾಗೂ ಅಧ್ಯಾತ್ಮಿಕ ಆರೋಗ್ಯದ ದೃಷ್ಟಿಯಿಂದ ನಗರದ ಕೆಆರ್‌ಎಸ್ ಪಕ್ಷಂನ್ ಹಾಲ್‌ನಲ್ಲಿ ಸೆ.18, 19 ಹಾಗೂ 20ರಂದು ಪಿರಮಿಡ್ ಧ್ಯಾನ ಶಿಬಿರವನ್ನು ಆಯೋಜಿಸಲಾಗಿದೆ ಎಂದು ಪಿರಮಿಡ್ ಧ್ಯಾನಕೇಂದ್ರದ ಆಯೋಜಕರು ತಿಳಿಸಿದ್ದಾರೆ.

ಶಿಬಿರಕ್ಕೆ ಬ್ರಹ್ಮರ್ಷಿ ತಟವರ್ತಿ ವೀರರಾಗವರಾವ್ ಹಾಗೂ ರಾಜಲಕ್ಷ್ಮೀ ಅವರು ಆಗಮಿಸಲಿದ್ದು, ಯೋಗಿ ಗ್ರಾಂಡ್ ಮಾಸ್ಟರ್ ಅರುಣ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ಧ್ಯಾನ ಮಾಡುವ ವಿಧಾನ, ಧ್ಯಾನದ ಮಹತ್ವ ಹಾಗೂ ಧ್ಯಾನದಿಂದ ನಿತ್ಯ ಜೀವನದಲ್ಲಿ ದೊರೆಯುವ ಮಾನಸಿಕ, ದೈಹಿಕ ಮತ್ತು ಅಧ್ಯಾತ್ಮಿಕ ಪ್ರಯೋಜನಗಳ ಕುರಿತು ಮಾಹಿತಿ ನೀಡಲಾಗುವುದು. ಶಿಬಿರದಲ್ಲಿ ಎರಡು ಗಂಟೆಗಳ ಮೌನ ಧ್ಯಾನ ಹಾಗೂ ಒಂದು ಗಂಟೆಯ ಆತ್ಮಜ್ಞಾನ ತರಗತಿ ನಡೆಯಲಿದೆ.

ಆಂಧ್ರಪ್ರದೇಶ, ತೆಲಂಗಾಣ ಸೇರಿದಂತೆ ರಾಜ್ಯದ ವಿವಿಧ ಭಾಗಗಳಿಂದ ಜನರು ಶಿಬಿರದಲ್ಲಿ ಭಾಗವಹಿಸಲಿದ್ದಾರೆ. ಶಿಬಿರದಲ್ಲಿ ಪಾಲ್ಗೊಳ್ಳುವವರಿಗೆ ಉಚಿತ ವಸತಿ ಹಾಗೂ ಊಟದ ವ್ಯವಸ್ಥೆ ಕಲ್ಪಿಸಲಾಗಿದೆ. ಈಗಾಗಲೇ 112 ಪಿರಮಿಡ್ ಧ್ಯಾನ ಕೇಂದ್ರಗಳ ಮೂಲಕ ಸಾವಿರಾರು ಮಂದಿ ಧ್ಯಾನದಲ್ಲಿ ಭಾಗವಹಿಸುತ್ತಿದ್ದಾರೆ ಎಂದು ಆಯೋಜಕರು ತಿಳಿಸಿದರು. ಧ್ಯಾನದ ಮೂಲಕ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಜೊತೆಗೆ ಆತ್ಮಜ್ಞಾನ ಮತ್ತು ಸಕಾರಾತ್ಮಕ ಚಿಂತನೆ ಬೆಳೆಸಿಕೊಳ್ಳಲು ಸಾಧ್ಯವಾಗಲಿದೆ.

# ಕೋಲಾರದಲ್ಲಿ ರಾತ್ರಿಯಿಡೀ ಸುರಿದ ಮಳೆ–ಮನೆಗಳಿಗೆ ನುಗ್ಗಿದ ನೀರು

ಕೋಲಾರ: ಕಳೆದ ರಾತ್ರಿ ಸುರಿದ ಧಾರಾಕಾರ ಮಳೆಗೆ ಕೋಲಾರದ ಕೆಜಿಎಫ್ ನಗರದಲ್ಲಿ ಭಾರೀ ಅವಾಂತರ ಸೃಷ್ಟಿಯಾಗಿದೆ. ಹಲವೆಡೆ ತಗ್ಗು ಪ್ರದೇಶಗಳಲ್ಲಿನ ಮನೆಗಳ ಒಳಗೂ ನೀರು ನುಗ್ಗಿದೆ.

ಕೆಜಿಎಫ್ ನಗರದ ಉರಿಗಾಂಪೇಟೆ, ಎಂ.ಬ್ಲಾಕ್, ಐ ಬ್ಲಾಕ್ ಸೇರಿದಂತೆ ಹಲವೆಡೆ ಮಳೆಯಿಂದ ಅವಾಂತರ ಸೃಷ್ಟಿಯಾಗಿದೆ. ಮನೆಗಳಿಗೆ ಮಳೆ ನೀರು ನುಗ್ಗಿದ್ದರಿಂದ ರಾತ್ರಿಯಿಡೀ ಜನ ಪರದಾಡಿದ್ದಾರೆ.

ಚರಂಡಿ ಹಾಗೂ ಕಾಲುವೆ ಒತ್ತುವರಿಯಿಂದ ಈ ಅವ್ಯವಸ್ಥೆ ನಿರ್ಮಾಣವಾಗಿದೆ ಎಂದು ಜನ ಅಸಮಾಧಾನ ಹೊರಹಾಕಿದ್ದಾರೆ.

ಮಳೆಯಿಂದ ಇಷ್ಟೆಲ್ಲಾ ಅವಾಂತರ ಸೃಷಗಟಿಯಾದರೂ ಸ್ಥಳಕ್ಕೆ ನಗರಸಭೆ ಸಿಬ್ಬಂದಿ ಭೇಟಿ ನೀಡಿಲ್ಲ.

ಅಧಿಕಾರಿಗಳು ಈ ಬಗ್ಗೆ ಗಮನಕೊಡುತ್ತಿಲ್ಲ ಎಂದು ಸ್ಥಳೀಯರ ಆಕ್ರೋಶ ಹೊರಹಾಕಿದ್ದಾರೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.